

# ಸಿಹಿ ಕಹಿ

ಸಂಪಾದಕರು : ಮಾರುತಿ ಬಸವಂತಪ್ಪ ಹೊಸಮನಿ
Editor : MARUTI BASAVANTAPPA HOSAMANI
Cell : +91 9741319119

ಕನ್ನಡ ದಿನಪತ್ರಿಕೆ, ಬಾಗಲಕೋಟೆ
ಬಾಗಲಕೋಟೆಯಿಂದ ಪ್ರಕಟಿತ
RNI REG No. : KARKAN/2016/75068

SIHI KAHI
KANNADA DAILY MORNING
BAGALKOT

Volume : 06 Issue : 266 Tuesday 12-03-2024 E-mail : maruti.b.hosamani76@gmail.com Page: 4 Price : Rs. 1/-


# ನಾಡಿಗೆಲ್ಲಾ ಶಿವರಾತ್ರಿ... ಈ ಗ್ರಾಮದ ಜನಕ್ಕೆ ನಿತ್ಯ ಜಾಗರಣೆ...!!

**ಸೂಲೇನಹಳ್ಳಿ :**
ಹೌದು, ಇದು ಚಿತ್ರದುರ್ಗ ಜಿಲ್ಲೆಯ ಮೊಳಕಾಲ್ಮುರು ತಾಲೂಕಿನ, ಹಾನಗಲ್ ಗ್ರಾ.ಪಂ ವ್ಯಾಪ್ತಿಯ ಸೂಲೇನಹಳ್ಳಿ ಗ್ರಾಮದ ಜನರ ಚಿಂತಾಜನಕ ಕಥೆ...

250–300 ಕುಟುಂಬಗಳು ವಾಸಿಸುವ ಸೂಲೇನಹಳ್ಳಿ ಗ್ರಾಮದ ಇಡೀ ರಸ್ತೆ, ಮನೆಯಂಗಳು ಚರಂಡಿ ನೀರಿನಿಂದ ತುಂಬಿದೆ.

ಈ ಎರಡು ತಿಂಗಳ ಹಿಂದೆ ಸೂಲೇನಹಳ್ಳಿ ಗ್ರಾಮ ಮೊಳಕಾಲ್ಮುರಿನ ಕವಾಡಿಗರಹಟ್ಟಿ ಯಾಗುವ ಮುನ್ನ ಜಿಲ್ಲಾಡಳಿತ ಎಚ್ಚೆತ್ತು ಕೊಳ್ಳಲಿ ಎನ್ನುವ ಶೀರ್ಷಿಕೆ ಅಡಿ ಸುದ್ದಿ ಆದಾಗ ಅಲ್ಲಿಗೆ ದೌಡಾಯಿಸಿದ ತಾಲೂಕಾ ಆಡಳಿತ ತಾತ್ಕಾಲಿಕ ಮಾರ್ಗ ಹುಡುಕಿ 'ಕೈ'ತೊಳೆದು ಕೊಂಡು ತೆರಳಿತ್ತು ,ಆದರೆ ಮತ್ತೆ 20 ದಿನಗಳಿಂದ ಇಡೀ ಗ್ರಾಮವೇ ಕೊಳಚೇ ನೀರಿನಿಂದ ತುಂಬಿದೆ !!

ಮೂಲ ಕಾರಣವಿಷ್ಟೇ, ಊರಿನ ಪಕ್ಕದಲ್ಲಿ ಹಾದು ಹೋಗುವ ರಾಜ್ಯ ಹೆದ್ದಾರಿ ಪಕ್ಕದ ಹೊಲದ ಮುಖಾಂತರವೇ ಚರಂಡಿ ನಿರ್ಮಿಸಿ ಗ್ರಾಮದ ನೀರು ಮುಂದೆ ಸಾಗಬೇಕು,

ಆ ಜಮೀನು ಪಟ್ಟಾ ಆಗಿರುವ ಕಾರಣ, ಕಫಆ ಭೂ ಸ್ವಾದಿನ ಪಡಿಸಿ ಕೊಂಡು ಸಂಬಂದ ಪಟ್ಟವರಿಗೆ ಪರಿಹಾರ ನೀಡಬೇಕಿತ್ತು ಆದ–ರೆ ಅವರು ಅದನ್ನು ಮಾಡದೇ ರಸ್ತೆ ಪೂರ್ಣಗೊಳಿಸಿ ಕೈತೊಳೆದುಕೊಂಡು ಹೋಗಿದ್ದಾರೆ.ಚರಂಡಿ ನೀರನ್ನು ತಮ್ಮ ಹೊಲದಲ್ಲಿ ಹಾದು ಹೊಗದಂತೆ ಅಡ್ಡ ಹಾಕಿದ್ದಾರೆ..

ಕಾರಣ... ಇಡೀ ಗ್ರಾಮವೇ ಸೊಳ್ಳೆ , ನೊಣಗಳಿಂದ ತುಂಬಿ ಊರಿನ ಹಲವಾರು ರೋಗ ರುಜಿನೆಗಳಿಂದ ಜನ ಆಸ್ಪತ್ರೆ ಸೇರುತ್ತಿದ್ದಾರೆ...ಆ ಚರಂಡಿ ನೀರು ಮನೆಯ ಸಂಪ್ ಸೇರುತ್ತಿವೆ, ಇಡೀ ಊರೇ ದುರ್ವಾಸನೆಯ ತಾಣವಾಗಿದೆ..

ಈಗ ಗ್ರಾಮಸ್ಥರೆಲ್ಲಾ ಮಾನ್ಯ ತಹಶಿಲ್ದಾರು, ಇಒ, ಪಿಡಬ್ಲ್ಯೂಡಿ ಅಧಿಕಾರಿಗಳು, ಪಿಡಿಒ,



ಬಳಿ ಅಲೆದು ಅಲೆದು ಸುಸ್ತಾಗಿದ್ದಾರೆ...

ಕ್ಷೇತ್ರದ ಜನ ಪ್ರತಿನಿಧಿಯ ಬಳಿ ಈ ವಿಷಯವಾಗಿ ತೆರಳಿದ ಜನರಿಗೆ ದೊರಕಿದ್ದು ಖಾಲಿ 'ಕೈ' ಉತ್ತರ...

ಅಲ್ಲಾ ಸ್ವಾಮಿ,

ಅಧಿಕಾರಿಗಳೇ, ಕ್ಷೇತ್ರದ ಜನ ಪ್ರತಿನಿಧಿಗಳೇ, ಒಂದೊಮ್ಮೆ ನಿಮ್ಮ ಮನೆಗಳ ಮುಂದೆ 15–20 ದಿನಗಳಿಂದ ಹೀಗೆ ಚರಂಡಿ ನೀರು ಸಂಗ್ರಹವಾದರೆ ಸುಮ್ಮನಿದ್ದೀರಾ !?

ಕಲುಷಿತ ನೀರು ಸೇವನೆಯಿಂದ ಸಾವುಗಳು ಸಂಭವಿಸಿದಾಗ ರಾಜ್ಯದ ಅಷ್ಟೂ ಆಡಳಿತ ಅಲ್ಲಿಗೆ ಭೇಟಿ ನೀಡಿದ ನಿದರ್ಶನ ನಮ್ಮ ಜಿಲ್ಲೆಯಲ್ಲೇ ನೆಡೆದುದ್ದಿದೆ...

ಸರ್ಕಾರ,ಆಡಳಿತ ಸೂಲೇನಹಳ್ಳಿ ಜನರು ರೋಗದಿಂದ ನರಳಿ ಸಾವಾಗುವ ತನಕ ಅಲ್ಲಿಗೆ ಬರುವುದಿಲ್ಲ ಎನ್ನುವ ಯೋಜನೆ ನಿಮ್ಮಲ್ಲಿದೆಯೇ...!?

ಪಟ್ಟಣಕ್ಕೆ 3 ಕಿ.ಮೀ ದೂರದಲ್ಲಿರುವ, ರಾಜ್ಯ ಹೆದ್ದಾರಿಯಲ್ಲಿಯೇ ಇರುವ ಗ್ರಾಮಕ್ಕೆ ಈ ಪರಿಸ್ಥಿತಿಯಾದರೆ ಇನ್ನು ದೂರದ ಗ್ರಾಮಗಳಲ್ಲಿ ನಿಮ್ಮಆಡಳಿತ ಹೇಗೆ ಸ್ಪಂದಿಸುತ್ತೀರಿ..!?

ಮಾನ್ಯ ಅಧಿಕಾರಿಗಳೇ, ಜನ ಪ್ರತಿನಿಧಿಗಳೇ, ಈ ಗ್ರಾಮದ ಸಮಸ್ಯೆ ಶಾಶ್ವತ ಬಗೆಹರಿಸುವ "ಗ್ಯಾರಂಟಿ" ನಿಮ್ಮಗಳಿಂದ & ನಿಮ್ಮ ಸರ್ಕಾರದಿಂದ ತುರ್ತು ಬೇಕಾಗಿದೆ....

ಮಾನವೀಯತೆ ಇನ್ನೂ ನಿಮ್ಮ ಆಡಳಿತ ವ್ಯವಸ್ಥೆಯಲ್ಲಿ ಉಳಿದಿದ್ದರೆ ಆದ್ಯತೆ ಮೇಲೆ ಈ ಗ್ರಾಮದ ಸಮಸ್ಯೆಗೆ ಶಾಶ್ವತ ಪರಿಹಾರ ನೀಡಿ...

ಧಿಕ್ಕಾರ..ಧಿಕ್ಕಾರ...!!

ಧೀರ್ಘ ನಿದ್ದೆಯಲ್ಲಿರೋ ಮೊಳಕಾಲ್ಮೂರು ಆಡಳಿತಕ್ಕೆ,

ಅದನ್ನು ಎಚ್ಚರಿಸಲು ಮುಂದಾಗಿದೆ......! ಎಂದು ವರದಿಯಾಗಿದೆ.

**ತಾಲೂಕ ವರದಿಗಾರರು ತಿಪ್ಪೇಸ್ವಾಮಿ ಎಸ್. ಕೆ ನ್ಯೂಸ್ ಕನ್ನಡ ಚಾನಲ್: ತಿಪ್ಪೇಸ್ವಾಮಿ. ಹೊಂಬಾಳೆ. ಮೊಳಕಾಲ್ಮೂರು**

# ನಾರಿ ಶಕ್ತಿ ಸಮಾವೇಶ ಹಾಗೂ ಸಾಧಕಿಯರಿಗೆ ಸನ್ಮಾನ ಸಮಾರಂಭ

**ಇಲಕಲ್ಲ :** ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಇಳಕಲ್ ನಗರದ ಶ್ರೀ ವಿಜಯಮಹಾಂತೇಶ ದಾಸೋಹ ಭವನದಲ್ಲಿ ವಿ.ವಿ.ಕೆ ಫೌಂಡೇಶನ್ ಅಧ್ಯಕ್ಷರಾದ ಶ್ರೀಮತಿ ವೀಣಾ ವಿಜಯಾನಂದ ಕಾಶಪ್ಪನವರ ಅವರ ವತಿಯಿಂದ ಬಾಗಲಕೋಟೆ ನಾರಿ ಶಕ್ತಿ ಸಮಾವೇಶ ಹಾಗೂ ಸಾಧಕಿಯರಿಗೆ ಸನ್ಮಾನ ಸಮಾರಂಭ ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮದಲ್ಲಿ ದಿವ್ಯ ಸಾನಿಧ್ಯವನ್ನು ಮ.ನಿ.ಪ್ರ ಗುರು



ಮಹಾಂತ ಸ್ವಾಮೀಜಿಗಳು, ಶಿರೂರ ಮಠದ ಗುರು ಬಸವಲಿಂಗ ಸ್ವಾಮೀಜಿಗಳು ವಹಿಸಿಕೊಂಡಿದ್ದರು.ಶ್ರೀಮತಿ ಇಂದುಮತಿ ಸಾಲಿಮಠ ಹಾಗೂ ಭವ್ಯಾ ನರಸಿಂಹಮೂರ್ತಿ ಮಹಿಳೆಯರ ಕುರಿತು ಉಪನ್ಯಾಸ ನೀಡಿ–ದರು. ಈ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಮಹಿಳೆಯರನ್ನು ಗುರುತಿಸಿ ಸನ್ಮಾನಿಸಲಾಯಿತು. ನಗರಸಭೆ ಸದಸ್ಯರು, ಹಿರಿಯ ಮುಖಂಡರು, ಮಹಿಳಾ ಮುಖಂಡರು, ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

**ತಾಲೂಕ ವರದಿಗಾರರು ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್:ಪ್ರತಾಪ್.ವಾಯ್. ಕಿಳ್ಳಿ.ಇಲಕಲ್ಲ**




**ಬಾಗಲಕೋಟೆ : ನಗರದಲ್ಲಿ ಸೋಶಿಯಲ್ ಡೆಮೋಕ್ರ್ಯಾಟಿಕ್ ಪಾರ್ಟಿ ಆಫ್ ಇಂಡಿಯಾ (ಎಸ್‌ಡಿಪಿಐ) ಪಕ್ಷ ಸಮಾವೇಶ ಹಮ್ಮಿಕೊಳ್ಳಲಾಗಿತ್ತು. ಪಕ್ಷದ ಸಿದ್ಧಾಂತಗಳ ಬಗ್ಗೆ ಸರಳವಾಗಿ ಚರ್ಚೆ ಮತ್ತು ಬರುವ ಚುನಾವಣೆ ಕುರಿತು ಚರ್ಚಿಸಲಾಯಿತು. ಈ ಕಾರ್ಯಕ್ರಮವು ಬಾಗಲಕೋಟ ವಿಧಾನಸಭಾ ಕ್ಷೇತ್ರದ ಅಧ್ಯಕ್ಷ ಮಹೆಬೂಬ ಹಡಗಲಿ ಅವರ ನೇತೃತ್ವದಲ್ಲಿ ಜರುಗಿತು. ಸಮಾವೇಶಕ್ಕೆ ಮುಖ್ಯ ಅತಿಥಿಯಾಗಿ ಎಸ್‌ಡಿಪಿಐ ಪಕ್ಷದ ರಾಜ್ಯ ಕಾರ್ಯದರ್ಶಿ ಅಬ್ದುಲ್ ರಹೀಂ ಪಟೇಲ್ ಅವರು ಆಗಮಿಸಿದ್ದರು. ಈ ಸಂದರ್ಭದಲ್ಲಿ ಅಬ್ದುಲ್‌ಕದಿರ್ ಜಮಾದಾರ, ಅಬೀದ ಮೂಮೀನ, ಸದ್ದಾಂ ಮುಲ್ಲಾ, ಕಾಸಿಂ ಗೊಳಸಂಗಿ, ಅಲ್ತಾಫ್ ಮುಜಾವರ, ಪಕ್ಷದ ಹಲವಾರು ಸದಸ್ಯರು ಉಪಸ್ಥಿತರಿದ್ದರು.**

# ಕೊಪ್ಪಳ ಜಿ.ಪಂ: ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಹುದ್ದೆಗಳಿಗೆ ಅರ್ಜಿ ಆಹ್ವಾನ

**ಕೊಪ್ಪಳ :** ಜಿಲ್ಲಾ ಪಂಚಾಯತಿ ವತಿಯಿಂದ ಕೊಪ್ಪಳ ಜಿಲ್ಲಾ ಪಂಚಾಯತಿಯ ವ್ಯಾಪ್ತಿಯ ಗ್ರಾಮ ಪಂಚಾಯತಿಗಳಲ್ಲಿ ಖಾಲಿ ಇರುವ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಕೊಪ್ಪಳ ಜಿಲ್ಲಾ ವ್ಯಾಪ್ತಿಯ 21 ಗ್ರಾಮ ಪಂಚಾಯತಿಗಳಲ್ಲಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳನ್ನು ಸ್ಥಾಪಿಸಿದ್ದು, ಗ್ರಾಮ ಪಂಚಾಯತಿ ಗ್ರಂಥಾಲಯಗಳಿಗೆ ಪ್ರಸ್ತುತ ಖಾಲಿ ಇರುವ ಪ್ರತಿ ಗ್ರಾಮ ಪಂಚಾಯತಿಗೆ ಒಂದರಂತೆ ಒಟ್ಟು 21 ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಖಾಲಿ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು.ಕುಷ್ಟಗಿ ತಾಲ್ಲೂಕಿನ ಅಂಟರಠಾಣ, ಕೇಸೂರು, ಗುಮಗೇರಾ, ತುಮರಿಕೊಪ್ಪ, ಬಿಳೇಕಲ್, ಶಿರಗುಂಪಿ, ಹಾಬಲಕಟ್ಟಿ ಹಾಗೂ ಹಿರೇನಂದಿಹಾಳ ಗ್ರಾಮ ಪಂಚಾಯತಿಗಳಲ್ಲಿ, ಕೊಪ್ಪಳ ತಾಲ್ಲೂಕಿನ ಕಲಕೇರಿ, ಮುನಿರಾಬಾದ ಡ್ಯಾಂ, ವಣಬಳ್ಳಾರಿ ಹಾಗೂ ಹಾಲವರ್ತಿ ಗ್ರಾಮ ಪಂಚಾಯತಿಗಳಲ್ಲಿ, ಯಲಬುರ್ಗಾ ತಾಲ್ಲೂಕಿನ ತುಮ್ಮರಗುದ್ದಿ, ಬೋದೂರು ಹಾಗೂ ಸಂಕನೂರು ಗ್ರಾಮ ಪಂಚಾಯತಿಗಳಲ್ಲಿ, ಗಂಗಾವತಿ ತಾಲ್ಲೂಕಿನ ಜಂಗಮರಕಲ್ಗುಡಿ ಹಾಗೂ ಸಣಾಪೂರ ಗ್ರಾಮ ಪಂಚಾಯತಿಗಳಲ್ಲಿ, ಕನಕಗಿರಿ ತಾಲ್ಲೂಕಿನ ಜೀರಾಳ ಹಾಗೂ ಬಸರಿಹಾಳ ಗ್ರಾಮ ಪಂಚಾಯತಿಗಳಲ್ಲಿ, ಕನಕಗಿರಿಯ ನೆಲಜೇರಿ ಗ್ರಾಮ ಪಂಚಾಯತಿಯಲ್ಲಿ, ಕಾರಟಗಿ ತಾಲ್ಲೂಕಿನ ಮೈಲಾಪೂರ ಗ್ರಾಮ ಪಂಚಾಯತಿಯಲ್ಲಿ ಖಾಲಿ ಇರುವ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಹುದ್ದೆಗಳಿಗೆ ನೇಮಕಾತಿ ನಡೆಸಲಾಗುತ್ತದೆ.

ಅರ್ಜಿ ನಮೂನೆಗಳನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಕಛೇರಿ, ಜಿಲ್ಲಾ ಪಂಚಾಯತ್, ಕೊಪ್ಪಳ ಹಾಗೂ ಎಲ್ಲಾ ತಾಲೂಕ ಪಂಚಾಯತಿ ಮತ್ತು ಸಂಬಂಧಿಸಿದ 21 ಗ್ರಾಮ ಪಂಚಾಯತಿಗಳಲ್ಲಿ ಮತ್ತು ಜಿಲ್ಲಾ ವೆಬ್‌ಸೈಟ್ www.koppal.nic.in ನಲ್ಲಿ ಡೌನ್‌ಲೋಡ್ ಮಾಡಿಕೊಳ್ಳಬಹುದು. ಅರ್ಜಿ ಸಲ್ಲಿಸಲು ಏಪ್ರಿಲ್ 03 ಕೊನೆಯ ದಿನವಾಗಿದ್ದು, ಅಂದು ಸಂಜೆ 05.30 ಗಂಟೆಯೊಳಗೆ ನಿಗದಿತ ನಮೂನೆಯಲ್ಲಿ ಭರ್ತಿಮಾಡಿದ ಅರ್ಜಿಯೊಂದಿಗೆ ದೃಢೀಕರಿಸಿದ ಅಗತ್ಯ ದಾಖಲೆಗಳನ್ನು ಖುದ್ದಾಗಿ ಅಥವಾ ನೋಂದಾಯಿತ ಅಂಚೆ ಮೂಲಕ "ಆಯ್ಕೆ ಸಮಿತಿಯ ಸದಸ್ಯ ಕಾರ್ಯದರ್ಶಿಗಳು ಹಾಗೂ ಉಪ ಕಾರ್ಯದರ್ಶಿಗಳು ಜಿಲ್ಲಾ ಪಂಚಾಯತ್, ಜಿಲ್ಲಾ ಆಡಳಿತ ಭವನ, ಹೊಸಪೇಟೆ ರೋಡ್ ಕೊಪ್ಪಳ" ಈ ವಿಳಾಸಕ್ಕೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಗಾಗಿ ಜಿಲ್ಲಾ ವೆಬ್‌ಸೈಟ್ ಹಾಗೂ ದೂ.ಸಂ: 9480871001 ಯನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಕ್ಕಳನ್ನು ಸುರಕ್ಷಿತ ಮತ್ತು ಸಂಸ್ಕಾರಯುತವಾಗಿ ಬೆಳೆಸುವುದು ನಮ್ಮ ನಿಮ್ಮೆಲರ ಕರ್ತವ್ಯ: ಶ್ರೀಕಂಠ ಎನ್.ಎ

**ಬೆಳಗಾವಿ :** ಮಕ್ಕಳನ್ನು ಸುರಕ್ಷಿತವಾಗಿ ಮತ್ತು ಸಂಸ್ಕಾರಯುತವಾಗಿ ಬೆಳೆಸುವುದು ನಮ್ಮ ನಿಮ್ಮೆಲರ ಆದ್ಯ ಕರ್ತವ್ಯವಾಗಿದೆ. ನಮ್ಮಲ್ಲಿ ಬರುವಂತಹ ಮಕ್ಕಳು ವಿಶೇಷದಲ್ಲಿ ವಿಶೇಷವಾಗಿರುತ್ತಾರೆ. ಅವರನ್ನು ತಿದ್ದಿ ಒಳ್ಳೆಯ ನಾಗರಿಕರನ್ನಾಗಿ ಸಮಾಜದ ಮುಖ್ಯವಾಹಿನಿಗೆ ತರುವಲ್ಲಿ ನಿಮ್ಮೆಲ್ಲರ ಪಾತ್ರ ಪ್ರಮುಖವಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಬಾಲನ್ಯಾಯ ಮಂಡಳಿಯ ಪ್ರಧಾನ ದಂಡಾಧಿಕಾರಿಗಳಾದ ಶ್ರೀಕಂಠ ಎನ್. ಎ ಹೇಳಿದರು.

ಜಿಲ್ಲಾಡಳಿತ,ಜಿಲ್ಲಾ ಪಂಚಾಯತ ಬೆಳಗಾವಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಬೆಳಗಾವಿ ಇವರ ಸಂಯುಕ್ತಾಶ್ರಯದಲ್ಲಿ ಸರಕಾರಿ ವೀಕ್ಷಣಾಲಯ ಸಭಾಗೃಹದಲ್ಲಿ ಶುಕ್ರವಾರ (ಮಾ.01) ರಂದು 'ಬಾಲನ್ಯಾಯ ಕಾಯಿದೆ ಮಕ್ಕಳ ಪಾಲನೆ ಮತ್ತು ರಕ್ಷಣೆ 2015 ತಿದ್ದುಪಡಿ 2021 ಕರ್ತವ್ಯ ಮತ್ತು ಜವಾಬ್ದಾರಿಗಳನ್ನು ಒಳಗೊಂಡತೆ' ಒಂದು ದಿನದ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಮಕ್ಕಳ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಇಂತಹ ತರಬೇತಿ ಕಾರ್ಯಾಗಾರವು ತುಂಬಾ ಮಹತ್ವವಾಗಿದ್ದು, ಸಂಸ್ಥೆಗಳಲ್ಲಿ



ಶಿಸ್ತಿನಿಂದ ಮಕ್ಕಳನ್ನು ಬೆಳೆಸಬೇಕೆಂದರು. ಮಕ್ಕಳ ಹಕ್ಕುಗಳನ್ನು ಮಕ್ಕಳಿಗೆ ಸಿಗುವ ಹಾಗೇ ನಿಮ್ಮೆಲ್ಲರ ಬೆಂಬಲವಿರಬೇಕು. ನಮ್ಮಲ್ಲಿ ಬರುವಂತಹ ಮಕ್ಕಳು ಬೇರೆ ಬೇರೆ ಪ್ರಕರಣ–ಕ್ಕೆ ಒಳಗೊಂಡಿದ್ದು, ಅವರಲ್ಲಿ ತಾರತಮ್ಯ ಮಾಡದೇ, ಹಿಯಾಳಿಸದೇ ಸೂಕ್ಷ್ಮವಾಗಿ ಅವರ ಮನಸ್ಥಿತಿ ಅರ್ಥಮಾಡಿಕೊಳ್ಳುವಲ್ಲಿ ಯಶಸ್ವಿಯಾಗಬೇಕು ಎಂದರು.

ಬಾಲನ್ಯಾಯ ಕಾಯ್ದೆಯಲ್ಲಿ ಮೂರು ರೀತಿಯಾದ ಮಕ್ಕಳನ್ನು ಕಾಣುತ್ತೇವೆ. ಮೊದಲನೆಯದಾಗಿ ಪರಿತ್ಯಕ್ತ ಮಗು–ಈ ಮಗು ತಂದೆ–ತಾಯಿಗೆ ಬೇಡವಾದ, ತ್ಯಜಿಸಿದ ಮಗುವಾಗಿರುತ್ತದೆ. ಇಂತಹ ಮಕ್ಕಳನ್ನು ಕಾನೂನಾತ್ಮಕವಾಗಿ ಇಲಾಖೆಯಿಂದ ಅರ್ಹ ದಂಪತಿಗಳಿಗೆ ದತ್ತು ನೀಡಲಾಗುತ್ತದೆ. ಎರಡನೆಯದಾಗಿ ಕಾನೂನಿನೊಡನೆ ಸಂಘರ್ಷಕ್ಕೊಳಗಾದ ಮಗು–ಇಲ್ಲಿ 18 ವರ್ಷದೊಳಗಿನ ಮಗು ಕಾನೂನಿನ ವಿರುದ್ಧವಾಗಿ ತಪ್ಪು ಮಾಡಿದಲ್ಲಿ ಬಾಲನ್ಯಾಯ ಮಂಡಳಿ ಮುಂದೆ ಹಾಜರುಪಡಿಸಲಾಗುತ್ತದೆ. ಕೊನೆಯದಾಗಿ ಪಾಲನೆ ಮತ್ತು ರಕ್ಷಣೆ ಅವಶ್ಯವಿರುವ ಮಗು, ಅನಾಥ, ಏಕಪೋಷಕ, ಬಾಲ್ಯವಿವಾಹಕ್ಕೊಳಗಾದ ಮಗು, ಬಾಲಕಾರ್ಮಿಕ, ಪೋಕ್ಸೋ, ಕುಟುಂಬದಲ್ಲಿ ಶಿಕ್ಷಣಕ್ಕೆ ಬೆಂಬಲವಿಲ್ಲದ ಮಗು, ಭೀಕರ ಕಾಯಿಲೆಗೆ ಒಳಗಾದ ಮಕ್ಕಳನ್ನು ಮಕ್ಕಳ ಕಲ್ಯಾಣ ಸಮಿತಿ ಮುಂದೆ ಹಾಜರುಪಡಿಸಿ, ಅವರಿಗೆ ಅವಶ್ಯವಿರುವ ಯೋಜನೆ ಸೌಲಭ್ಯ ನೀಡಬೇಕೆ ಎಂದು ಸೂಚಿಸಿದರು.

ಇಂದು ವಿಶೇಷವಾಗಿ ವಿಶ್ವ ತಾರತಮ್ಯ ದಿನವಾಗಿ ಆಚರಿಸುತ್ತಿದ್ದು, ನೀವು ಕೆಲಸ ಮಾಡುವ ಸ್ಥಳದಲ್ಲಿ ಹಾಗೂ ನಿಮ್ಮ ಜೀವನದಲ್ಲಿ ತಾರತಮ್ಯತೆಯನ್ನು ಹೋಗಲಾಡಿಸಿ, ಕರ್ತವ್ಯ ನಿರ್ವಹಿಸಿ ನಮ್ಮ ಬಾಲನ್ಯಾಯ ಕಾಯ್ದೆಯಲ್ಲಿ ಕಾಲಕಾಲಕ್ಕೆ ಅನುಗುಣವಾಗಿ ಕಾಯ್ದೆಗಳು ಬದಲಾವಣೆಗೊಂಡಲ್ಲಿ ಇಲಾಖೆಯವರು ಸಿಬ್ಬಂದಿಗಳಿಗೆ ತರಬೇತಿಗಳನ್ನು ನೀಡುತ್ತಿರುತ್ತಾರೆ ತಾವು ಅದರ ಸದುಪಯೋಗ ಪಡೆದುಕೊಂಡು ಆ ಚೌಕಟ್ಟಿನಲ್ಲಿ ಕೆಲಸ ಮಾಡಬೇಕು ಎಂದರು.

ಮಕ್ಕಳ ವಿಶೇಷ ಪೋಲಿಸ್ ಘಟಕದ ನೋಡಲ್ ಅಧಿಕಾರಿ ಹಾಗೂ ಪೊಲೀಸ್ ಉಪ ಆಯುಕ್ತರಾದ ಪಿ ವಿ ಸ್ನೇಹಾ ಮಾತನಾಡಿ, ಪೋಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಯವರು ಮಕ್ಕಳ ಸ್ನೇಹಿಯಾಗಿರುತ್ತಾರೆ. ಅಂತಹ ವಾತಾವರಣವನ್ನು ಬೆಳಗಾವಿ ನಗರ ಆಯುಕ್ತಾಲಯದ ವ್ಯಾಪ್ತಿಯಲ್ಲಿ ನಿರ್ಮಿಸಲಾಗಿದೆ. ಮಕ್ಕಳ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿ ತುರ್ತಾಗಿ ಕ್ರಮ ಕೈಗೊಳ್ಳಲಾಗುತ್ತಿದೆ. ಇದಕ್ಕೆ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ನಮ್ಮ ಪ್ರತಿ ಪೋಲೀಸ್ ಠಾಣೆಗಳಿಗೆ ಭೇಟಿ ನೀಡಿ ಸೂಕ್ತ ಮಾರ್ಗದರ್ಶನ ನೀಡುವದರೊಂದಿಗೆ ಮಕ್ಕಳ ಸ್ನೇಹಿ ಪೋಲೀಸ್ ಠಾಣೆಗಳ ನಿರ್ಮಾಣದಲ್ಲಿ ಕೈಜೋಡಿಸಿರುವದು ಶ್ಲಾಘನಿಯ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಹಾಂತೇಶ ಭಜಂತ್ರಿ, ಪೋಲಿಸ ಅಧಿಕಾರಿಗಳು, ವಿವಿಧ ಠಾಣೆ–ಯ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಸೇರಿದಂತೆ ಹಾಜರಿದ್ದರು.

# ಕೋಗಳಿ ಗ್ರಾಮದಲ್ಲಿ ಸರಳ ಸಾಮೂಹಿಕ ವಿವಾಹಗಳು

**ಕೋಗಳಿ :** ಕೊಟ್ಟೂರು ತಾಲೂಕಿನ ಕೋಗಳಿ ಗ್ರಾಮದಲ್ಲಿ 11 ಮಾರ್ಚ್ 2024 ಸೋಮವಾರ ಶ್ರೀ ನಂದೀಶ್ವರ ಸ್ವಾಮಿಯ ರಥೋತ್ಸವದ ಪ್ರಯುಕ್ತ ಇಂದು ಕೋಗಳಿ ಗ್ರಾಮದಲ್ಲಿ ಶ್ರೀ ನಂದೀಶ್ವರ ಸೇವಾ ಸಮಿತಿ ಮತ್ತು ಸಮಸ್ತ ದೈವಸ್ತರ ಸಹಯೋಗದಲ್ಲಿ ಸರಳ ಸಾಮೂಹಿಕ ವಿವಾಹಗಳನ್ನು ಹಮ್ಮಿಕೊಳ್ಳಲಾಗಿತ್ತು,

ಇಂದಿನ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ನವಲಿ ಮಠದ ಷ. ಬ್ರ. ಶ್ರೀ ಶ್ರೀ ಶಿವಲಿಂಗ ರುದ್ರಮುನಿ ಶಿವಾಚಾರ್ಯ ಮಹಾ ಸ್ವಾಮಿಗಳು, ಹಂಪಸಾಗರ ಇವರು ದಿವ್ಯ ಸಾನಿಧ್ಯವನ್ನು ವಹಿಸಿ, ನೂತನ ದಂಪತಿಗಳ ದಾಂಪತ್ಯ ಜೀವನದಲ್ಲಿ ಅನೇಕ ಕಷ್ಟಗಳು ಬರುತ್ತವೆ. ಅವುಗಳನ್ನು ದಂಪತಿಗಳಿಬ್ಬರು ಜೊತೆಗೂಡಿ ಎದುರಿಸಿ, ಜೀವನವೆಂಬ ಭವ ಸಾಗರವನ್ನು ದಾಟಬೇಕು, ಸುಖ ಸಂಸಾರದಲ್ಲಿ ಸಂತೋಷ ಕಾಣಬೇಕು ಎಂದು ಹೇಳಿ ಶುಭ ಹಾರೈಸಿ ಆಶೀರ್ವಚನ ನೀಡಿದರು.

ಹಗರಿಬೊಮ್ಮನಹಳ್ಳಿ ಕ್ಷೇತ್ರದ ಜನಪರ ಶಾಸಕರಾದ ಶ್ರೀ ಕೆ ನೇಮಿರಾಜ್ ನಾಯ್ಕ್, ಮಾತನಾಡಿ ಆಧುನಿಕ ಜಗತ್ತಿನಲ್ಲಿ ಸರಳ ಸಾಮೂಹಿಕ ಮದುವೆಗಳ ಅವಶ್ಯಕತೆ



ಇದ್ದು, ಕಡು ಬಡ ಕುಟುಂಬಗಳ ಆರ್ಥಿಕ ಹೊರೆಯನ್ನು ಕಡಿಮೆ ಮಾಡುವಲ್ಲಿ ಸಹಾಯಕವಾಗಿವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕೋಗಳಿ ಗ್ರಾಮದ ಮುಖಂಡರಾದ ಕೆ ಎನ್ ಸಿದ್ದಲಿಂಗನಗೌಡ್ರು, ಜೆಡಿಎಸ್ ತಾಲೂಕು ಅಧ್ಯಕ್ಷ ವೈ ಮಲ್ಲಿಕಾರ್ಜುನ, ಎಂ ಮಹೇಶಪ್ಪ, ಟಿ ಶಿವರುದ್ರಪ್ಪ, ಎಸ್ ಎಂ ಕೊಟ್ರಯ್ಯ, ಮರುಳಸಿದ್ದಯ್ಯ, ಕಂಬಿ ಕೊಟ್ರಪ್ಪ, ಹಾಗೂ ಶ್ರೀ ನಂದೀಶ್ವರ ಸೇವಾ ಸಮಿತಿಯ ಅಧ್ಯಕ್ಷರು ಮತ್ತು ಸರ್ವ ಸದಸ್ಯರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಪಂಚಾಕ್ಷರಿ ಸಂಗೀತ ಪಾಠಶಾಲಾ ಮಕ್ಕಳ ತಂಡದಿಂದ ಸುಗಮ ಸಂಗೀತ ಕಾರ್ಯಕ್ರಮವನ್ನು ನೆಡಸಿಕೊಟ್ಟರು.

ಡಿ ಬಸವರಾಜ್ ಕಾರ್ಯಕ್ರಮವನ್ನು ನಿರೂಪಿಸಿದರು, ನಂದಿನಿ ಅಕ್ಷತಾ ಸಂಗಡಿಗರು ಪ್ರಾರ್ಥನಾ ಗೀತೆ ಹಾಡಿದರು, ಹೆಚ್ ಎಂ ಈಶಣ್ಣ ವಂದನಾರ್ಪಣೆ ಮಾಡಿದರು.

**ತಾಲೂಕ ವರದಿಗಾರರು ಹಾಗೂ ಎಸ್. ಕೆ ನ್ಯೂಸ್ ಕನ್ನಡ ಚಾನಲ್:ಪ್ರದೀಪ್. ಕುಮಾರ್.ಸಿ.ಕೊಟ್ಟೂರು**

# ವಾರ್ಷಿಕ ಸ್ನೇಹ ಸಮ್ಮೇಳನ ಹಾಗೂ 7ನೇ ವರ್ಗದ ಬೀಳ್ಕೊಡುಗೆ ಸಮಾರಂಭ

**ಕಲಕೇರಿ :** ಸರ್ಕಾರಿ ಉರ್ದು ಹಿರಿಯ ಪ್ರಾಥಮಿಕ ಶಾಲೆ .ನಂ.01 ವಾರ್ಷಿಕ ಸ್ನೇಹ ಸಮ್ಮೇಳನ ಹಾಗೂ 7ನೇ ವರ್ಗದ ವಿದ್ಯಾರ್ಥಿಗಳ ಬೀಳ್ಕೊಡುವ ಸಮಾರಂಭ. ಈ ಶಾಲೆಯ.ಖ ಆ ಒಅ. ಅಧ್ಯಕ್ಷರಾದ ಲಾಳೇಮಶಾಕ ವಲ್ಲಿಭಾಯ ಇವರ ನೇತೃತ್ವದಲ್ಲಿ ಈ ಸಮಾರಂಭ ಅದ್ದೂರಿಯಾಗಿ ನೆರವೇರಿತು.

ಮೌಲಾನಾ ನಾಸಿರ ಉಮ್ರಿ ಇನಾಮ್ದಾರ ಕಲಕೇರಿ. ಏ.ಖ. ವಲ್ಲಿಭಾಯ.ನಿ. ಶಿಕ್ಷಕರು. ಲಕ್ಕಪ್ಪ ಬಡಿಗೇರ ಮಾಜಿ ತಾಲೂಕು ಪಂಚಾಯಿತಿ ಸದಸ್ಯರು ಇವರು ನೂತನ ತಾಳಿಕೋಟಿ ತಾಲೂಕಿನಲ್ಲಿ ನಮ್ಮ ಕಲಕೇರಿ ಗ್ರಾಮದಲ್ಲಿ ಮಕ್ಕಳಿಗೆ ಶಿಕ್ಷಣ ಇಲ್ಲಿಯ ಶಿಕ್ಷಕರು ವಿದ್ಯಾರ್ಥಿಗಳಿಗೆ ತಮ್ಮ ಮಕ್ಕಳಂತೆ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸ ಹೇಳುವುದರಲ್ಲಿ ನಂಬರ್ ವನ್ ಯುಬಿಎಸ್ ಉರ್ದು ಶಾಲೆಯಲ್ಲಿ ಇಲ್ಲಿ ಕಲಿತಂತಹ ಮಕ್ಕಳು ಮುಂದೆ ಹೋಗಿ ಅತಿ ಎತ್ತರದಲ್ಲಿ ಬೆಳೆಯಬೇಕಾದರೆ ಕಲಿಕೇರಿ ನಂಬರ್ ಒನ್ ಉರ್ದು ಶಾಲೆಯಲ್ಲಿ ಕಲಿತಂತ ವಿದ್ಯಾರ್ಥಿಗಳು ಶಿಕ್ಷಕರು ಆಗಿದ್ದಾ–ರೆ ಪೊಲೀಸ ಅಧಿಕಾರಿಗಳು ಆಗಿದ್ದಾರೆ ಇದಕ್ಕೆಲ್ಲಾ ಕಾರಣರೂ ಈ ಶಾಲೆಯಲ್ಲಿ ಇದ್ದಂತಹ ಮುಖ್ಯ ಗುರುಗಳು ಶಿಕ್ಷಕರು ಗುರುಮಾತೆ ಅವರ ಒಂದು ಶಿಕ್ಷಣ ಆ ವಿದ್ಯಾರ್ಥಿಗಳಿಗೆ ಒಂದು ಮಾರ್ಗದರ್ಶನ ನೀಡಿದಂತ ಈ ಶಾಲೆಯ ಮುಖ್ಯ ಗುರುಗಳು ಶಿಕ್ಷಕರಿಗೆ ಮತ್ತು .ಡಾ. ಬಾಬಾ ಸಾಹೇಬರು ಒಂದು ಮಾತನ್ನು ಹೇಳಿದರೂ ವಿದ್ಯಾರ್ಥಿಗಳಿಗೆ ಪ್ರತಿಯೊಂದು ವಿದ್ಯಾರ್ಥಿಗಳು ವಿದ್ಯೆಯನ್ನು ಕಲಿತು ಸಿಂಹನಂತೆ ಗರ್ಜಿಸಬೇಕೆಂದು ತಿಳಿಸಿದರು ಅವರ ಹೇಳಿದಂತ ನುಡಿಗಳು ನಮಗೆಲ್ಲಾ ಮಾರ್ಗದರ್ಶನ ನೀಡಿದ.ಡಾ. ಬಾಬಾ ಸಾಹೇಬ ಅಂಬೇಡ್ಕರ್ ಇವರ ಹಾದಿಯಲ್ಲಿ ನಾವು ನಡೆಯಬೇಕು ಎಂದು ತಿಳಿಸಿದರು.

ಆಯ್.ಎಫ್.ಭಾಲ್ಕಿ ಶಿಕ್ಷಣ ಸಂಯೋಜಕರು ನಾವು ಕೂಡ ಕಲಕೇರಿ ಮೂರು ಶಾಲೆಯಲ್ಲಿ ಕಲಿತಂತಾ ಪ್ರತಿಯೊಂದು ವಿದ್ಯಾರ್ಥಿಗಳು ಒಂದು ಉನ್ನತ ಮಟ್ಟಕ್ಕೆ ಬೆಳೆದು ಈ ಶಾಲೆಯ ಕೀರ್ತಿ ಬೆಳಗಲಿ ಎಂದು



ಮುಖ್ಯ ಗುರುಗಳಿಗೆ ತಿಳಿಸಿದರು. ನಬಿಲಾಲ ನಾಯ್ಕೋಡಿ ಗ್ರಾಮ ಪಂಚಾಯಿತಿ ಸದಸ್ಯರು ಇವರು ಕೂಡ ವಿಶಾಲೆಯಲ್ಲಿ ಕಲಿತಂತಹ ಮಕ್ಕಳು ಬಹಳ ಚೆನ್ನಾಗಿ ಕಲಿತು ಒಳ್ಳೆಯ ಅಭ್ಯಾಸಗಳನ್ನು ಮಾಡಿ ಈ ಶಾಲೆಯ ಕೀರ್ತಿ ಬೆಳಗಲಿ ಎಂದು ತಿಳಿಸಿದರು. ರಾಜ್‌ಅಹ್ಮದ ಸಿರಸಗಿ ಗ್ರಾಮ ಪಂಚಾಯಿತಿಯ ಅಧ್ಯಕ್ಷರು. ಪರಶುರಾಮ್ ಬೇಡರ ಊರಿನ ಮುಖಂಡರು. ಎಸ್.ಎಲ್. ನಾಯ್ಕೋಡಿ. ಸಿ.ಆರ್.ಪಿ.ಕಲಕೇರಿ. ಬಿ.ಡಿ. ಬಾಣಕಾರ ನಿವೃತ್ತಿಹೊಂದಲಿರುವ ಮುಖ್ಯ ಗುರುಗಳು, ಟಿ. ಇ.ಎಂ.ಕಲಕೇರಿ. ಎನ್.ಎಮ್.ಬಡಮ್ಮಗೋಳ ನಿವೃತ್ತ ಹೊಂದಲಿರುವ ಕರುಣಿಕರು. ಟಿ.ಇ.ಎಂ. ಕಲಕೇರಿ. ಜೆ.ಬಿ. ಕುಲಕರ್ಣಿ ಮುಖ್ಯ ಶಿಕ್ಷಕರು .ಎಂಪಿ .ಎಸ್.ಕಲಕೇರಿ. ಎಸ್.ಬಿ.ಪಡಶೆಟ್ಟಿ ಮುಖ್ಯ ಗುರುಗಳು.ಕೆ.ಜಿ.ಎಸ್. ಕಲಕೇರಿ. ಆನಂದ ಅಡಿಕಿ ಅಧ್ಯಕ್ಷರುಕಲಕೇರಿ. ಚಂದ್ರಕಾಂತ ಬಡಿಗೇರ ಉಪಾಧ್ಯಕ್ಷ ಕಲಕೇರಿ. ಡಿ.ಎನ್.ಚಿಕ್ಕ ಮಠ ಶಿಕ್ಷಕರು. ಡಾ.ಎಮ್.ಎಲ್. ವಡ್ಡರ ಶಿಕ್ಷಕರು. ಎಮ್.ಎಲ್. ಹೊನ್ನಳ್ಳಿ ಶಿಕ್ಷಕರು. ಅನ್ವರ ಸಿಪಾಯಿ. ಎಮ್.ಡಿ. ಉಸ್ತಾದ. ನಂಬರ ವನ ಉರ್ದು ಶಾಲೆಯ ಮುಖ್ಯ ಗುರುಗಳು ಯಾಕೂಬ ಸಿರಸಗಿ. ಡಿ.ಬಿ.ಅಡಿಕಿ ಕನ್ನಡ ಶಿಕ್ಷಕರು. ಂ.ಖ. ಮೂಲಿಮನಿ ಶಿಕ್ಷಕರು. ಕಪೂರ ಮಂದೇವಾಲ. ಕಾಲೇಸಾಬ ನಾಯ್ಕೋಡಿ. ಶಾಲೆಯ ವಿದ್ಯಾರ್ಥಿಗಳು ಎಲ್ಲಾ ಪಾಲಕರು ಊರಿನ ಹಿರಿಯರು ಪಾಲ್ಗೊಂಡು ಈ ಸಮಾರಂಭವನ್ನು ಯಶಸ್ವಿ ಗೊಳಿಸಿದರು.

**ತಾಲೂಕ ವರದಿಗಾರರು ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್:ಮೈಬೂಬಬಾಷ.ಮನಗೂಳಿ.ತಾಳಿಕೋಟೆ**

# ಮತ್ತೊಮ್ಮೆ ಮೋದಿ 3.0: ಗ್ರಾಮ ಚಲೋ ಅಭಿಯಾನ ಆರಂಭ



**ಮೂಡಲಗಿ :** ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಕಳೆದ 10 ವರ್ಷಗಳಲ್ಲಿ ಮಾಡಿದ ಸಾಧನೆಗಳನ್ನು ಮನೆ, ಮನೆಗೆ ಮುಟ್ಟಿಸುವ ಮೂಲಕ ದೇಶಕ್ಕಾಗಿ ಮತ್ತೊಮ್ಮೆ ಮೋದಿ 3.0 ಎಂಬ ಘೋಷ ವಾಕ್ಯದೊಂದಿದೆ ಗ್ರಾಮ ಚಲೋ ಅಭಿಯಾನ ಆರಂಭಿಸಿದ್ದೇವೆ ಎಂದು ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ಹೇಳಿದರು.

ರವಿವಾರ ಅರಭಾವಿ ಮತಕ್ಷೇತ್ರದ ಶಿವಾಪೂರ(ಹ) ಗ್ರಾಮದಲ್ಲಿ ಗ್ರಾಮ ಚಲೋ ಅಭಿಯಾನ ನಿಮಿತ್ತ ಪ್ರಧಾನಿ ನರೇಂದ್ರ ಮೋದಿ ಅವರ ಆಡಳಿತ ಅವಧಿಯಲ್ಲಿ ಕೈಗೊಂಡ ಅನೇಕ ಜನಪರ, ಅಭಿವೃದ್ಧಿ ಪರ ಯೋಜನೆ ವಿವರಿಸುವ ಕರಪತ್ರಗಳನ್ನು ವಿತರಿಸುವ ಮೂಲಕ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದರು.

ಪ್ರಧಾನಿ ನರೇಂದ್ರ ಮೋದಿ ಅವರ ಆಡಳಿತದ ಕಾಲಘಟ್ಟದಲ್ಲಿ ನಮ್ಮ ಹೆಮ್ಮೆಯ ಭಾರತ ವಿಶ್ವಗುರು ಸ್ಥಾನವನ್ನು ಅಲಂಕ–ರಿಸುವತ್ತ ಮುನ್ನಡೆದಿದೆ, 2047ನೇ ವರ್ಷಕ್ಕೆ ಭಾರತವು ವಿಕಸಿತ ಭಾರತವಾಗಿ ಪರಿವರ್ತನೆ ಹೊಂದಬೇಕು. ಭಾರತವು ಸಂಪೂರ್ಣ ಅಭಿವೃದ್ಧಿ ಹೊಂದಿದ ರಾಷ್ಟ್ರವಾಗಿ ಪರಿವರ್ತನೆ ಕಾಣಬೇಕೆಂದು ಪ್ರಧಾನಿ ನರೇಂದ್ರ ಮೋದಿ ಅವರ ಕನಸು ನನಸಾಗಲು ಗ್ರಾಮಗಳೂ ಅಭಿವೃದ್ಧಿ ಹೊಂದಬೇಕಿದೆ ಎಂದು ವಿಶ್ಲೇಷಿಸಿದರು.

ದೇಶದ ಪ್ರತಿಯೊಬ್ಬರೂ ಒಂದಲ್ಲ ಒಂದು ರೀತಿಯಲ್ಲಿ ಪ್ರಧಾನಿ ಮೋದಿ ಅವರ ಕಾರ್ಯಕ್ರಮಗಳ ಫಲಾನುಭವಿಗಳಾಗಿದ್ದಾರೆ. ಮುಖ್ಯವಾಗಿ ಪ್ರತಿಯೊಬ್ಬರೂ ಬ್ಯಾಂಕ್ ಖಾತೆ ಹೊಂದುವಂತಾಗಿದೆ, ರಾಮ ಮಂದಿರ ಲೋಕಾರ್ಪಣೆ, ಕಾಶ್ಮೀರ ವಿಶೇಷ ಸ್ಥಾನಮಾನ ರದ್ದು, ರೈತರಿಗೆ ಅಭಯ ತುಂಬುವ ಕಿಸಾನ ಸಮ್ಮಾನ ಯೋಜನೆ, ಮಹಿಳೆಯರಿಗೆ ರಾಜಕೀಯ ಅದರಲ್ಲೂ ಶಾಸನ ಸಭೆಗಳಲ್ಲಿ ಮುಂಚೂಣಿ ಸ್ಥಾನವನ್ನು ಕಲ್ಪಿಸುವ ಮಸೂದೆ ಮಂಡನೆ, ಉಜ್ವಲಾ ಯೋಜನೆ, ಪಿಎಂ ಗರೀಬ್ ಕಲ್ಯಾಣ್ ಅನ್ನ ಯೋಜನೆ, ಜಲಜೀವನ ಮಿಷನ್ ಹೀಗೆ ಮೋದಿಜಿ ಅವರ ಸಾಧನೆ ಪಟ್ಟಿ ದೊಡ್ಡದಿದೆ.

ಮೋದಿಜಿ ಅವರ ಸಮರ್ಥ ಆಡಳಿತ, ನಾಯಕತ್ವಕ್ಕೆ ಜಗತ್ತೇ ಮೆಚ್ಚಿದೆ. ಹೀಗಾಗಿ ಈ ಬಾರಿಯೂ ಸಹ ಅಭಿವೃದ್ಧಿಗೆ ಪ್ರಧಾನಿ ಮೋದಿ ಅವರನ್ನು ಬೆಂಬಲಿಸಬೇಕು, ಕಾರ್ಯಕರ್ತರು ಮೋದಿಜಿ ಅವರ ಸಾಧನೆಯನ್ನು ತಿಳಿಸುವ ಕಾರ್ಯ ಮಾಡಬೇಕು ಎಂದು ಕರೆ ನೀಡಿದರು

ಈ ಸಂದರ್ಭದಲ್ಲಿ ಪ್ರಮುಖರಾದ ಶಿವನಗೌಡ ಪಾಟೀಲ, ಸತೀಶ ಜುಂಜರವಾಡ, ಮಹಾಂತೇಶ ಕುಡಚಿ, ಈಶ್ವರ ಬೆಳಗಲಿ, ಕೆಂಪಣ್ಣ ಮುಧೋಳ, ಮಲ್ಲಪ್ಪ ಜುಂಜರವಾಡ, ಪ್ರಕಾಶ ಮಾದರ, ಡಾ. ಬಿ,ಎಂ ಪಾಲಭಾಂವಿ, ಶ್ರೀಕಾಂತ ಕೌಜಲಗಿ, ಮದನ್ ದಾನನ್ನವರ ಸೇರಿದಂತೆ ಅನೇಕ ಕಾರ್ಯಕರ್ತರು ಉಪಸ್ಥಿತರಿದ್ದರು.

## ವಿದ್ಯಾರ್ಥಿಗಳು ಕಲಿಕೆಯ ಸಂಧರ್ಭದಲ್ಲೇ ತರಬೇತಿ ಪಡೆಯುವುದಕ್ಕೆ ಕೈಗಾರಿಕೋದ್ಯಮಿಗಳು ಕೈಜೋಡಿಸಿ: ಸಚಿವ ಡಾ. ಎಂ.ಸಿ ಸುಧಾಕರ್ ಕರೆ

# ಎಫ್‌ಕೆಸಿಸಿಐ ಮಂಥನ್ ಕಾರ್ಯಕ್ರಮಕ್ಕೆ ಚಾಲನೆ




ಬೆಂಗಳೂರು : ಉನ್ನತ ಶಿಕ್ಷಣ ಪಡೆದ ವಿದ್ಯಾರ್ಥಿಗಳಿಗೆ ಉದ್ಯೋಗ ಕಲ್ಪಿಸುವ ನಿಟ್ಟಿನಲ್ಲಿ ನಮ್ಮ ಇಲಾಖೆ ಮಹತ್ವದ ಹೆಜ್ಜೆ ಇಟ್ಟಿದೆ. ಉದ್ಯೋಗ ಸೃಷ್ಟಿ ಹಾಗೂ ವಿದ್ಯಾರ್ಥಿಗಳು ತಮ್ಮ ಕಲಿಕೆಯ ವೇಳೆಯಲ್ಲೇ ಉದ್ಯೋಗಾವಕಾಶಕ್ಕೆ ಸಜ್ಜಾಗುವಂತೆ ಮಾಡುವ ನಿಟ್ಟಿನಲ್ಲಿ ತರಬೇತಿ ನೀಡುವಂತಹ ಕಾರ್ಯದಲ್ಲಿ ರಾಜ್ಯದ ಕೈಗಾರಿಕೋದ್ಯಮಿಗಳು ಸರಕಾರದೊಂದಿಗೆ ಕೈಜೋಡಿಸಬೇಕು ಎಂದು ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ ಸುಧಾಕರ್ ಕರೆ ನೀಡಿದರು.

ಇಂದು ಎಫ್.ಕೆ.ಸಿ.ಸಿ.ಐ ನಲ್ಲಿ ಏರ್ಪಡಿಸಿದ್ದ "ಮಂಥನ" ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಕೈಗಾರಿಕೆಗಳಿಗೆ ಅವಶ್ಯಕವಿರುವ ಕೌಶಲ್ಯಾಧಾರಿತ ಪಠ್ಯಕ್ರಮಗಳನ್ನು ಅಳವಡಿಸಿ ಕೊಳ್ಳಲು ಈಗಾಗಲೇ ನಿರ್ಧರಿಸಲಾಗಿದೆ. ಈ ನಿಟ್ಟಿನಲ್ಲಿ ವಾದ್ವಾನಿ ಫೌಂಡೇಶನ್, ಟೊಯೋಟಾ ಕಿರ್ಲೋಸ್ಕರ್, ಸೇರಿದಂತೆ ಹಲವಾರು ಸಂಸ್ಥೆಗಳೊಂದಿಗೆ ಒಡಂಬಡಿಕೆ ಮಾಡಿಕೊಳ್ಳಲಾಗಿದೆ. ಕೈಗಾರಿಕೆಗಳು ಸಹಕಾರ ನೀಡಿದರೆ ಅವರಿಗೆ ಅಗತ್ಯವಿರುವಂತಹ ಕೌಶಲ್ಯಾಧಾ–ರಿತ ಅನುಭವ ಹೊಂದಿದ ವಿದ್ಯಾರ್ಥಿಗಳನ್ನು ಉದ್ಯೋಗಿಯಾಗಿ ಸುಲಭವಾಗಿ ಪಡೆಯಬಹುದಾದ ವಿಸ್ತಾರವಾದ ಕಾರ್ಯಕ್ರಮಗಳನ್ನು ಸರಕಾರದ ವತಿಯಿಂದ ಹಮ್ಮಿಕೊಂಡಿದ್ದೇವೆ ಎಂದರು.

ರಾಜ್ಯದ ಖಾಸಗಿ ಶಿಕ್ಷಣ ಸಂಸ್ಥೆಗಳು ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಗಳ ನಡುವೆ ಸಾಕಷ್ಟು ವ್ಯತ್ಯಾಸಗಳಿವೆ. ಖಾಸಗಿ ಶಿಕ್ಷಣದಲ್ಲಿನ ಉದ್ಯೋಗಾವಕಾಶಗಳು ಸರ್ಕಾರಿ ಕಾಲೇಜಿನ ವಿದ್ಯಾರ್ಥಿಗಳಿಗೆ ಸಿಗುತ್ತಿಲ್ಲ. ಈ ತಾರತಮ್ಯವನ್ನು ತಗೆದು ಹಾಕುವ ನಿಟ್ಟಿನಲ್ಲಿ ಸರ್ಕಾರಿ ತಾಂತ್ರಿಕ ಶಿಕ್ಷಣ ಸಂಸ್ಥೆಗಳು ಹಾಗೂ ಸಾಮಾನ್ಯ ಪದವಿ ಕಾಲೇಜುಗಳನ್ನು ಉನ್ನತ ದರ್ಜೆಗೇರಿಸಲು ಸಜ್ಜಾಗಿದ್ದೇವೆ. ಕೈಗಾರಿಕೆಗಳಲ್ಲಿ ಕೆಲಸ ನೀಡುವಾಗ ಅನುಭವ ಕೇಳುತ್ತಾರೆ ಈ ಅನುಭವವನ್ನು ನಾವೀಗ ವಿದ್ಯಾರ್ಥಿ ದೆಸೆಯಲ್ಲೆ ಶಿಕ್ಷಣ ಮತ್ತು ಕೈಗಾರಿಕೆಗಳೊಂದಿಗಿನ ಒಡಂಬಡಿಕೆಯೊಂದಿಗೆ ತರಬೇತಿಗೊಳಿಸಿ ಉದ್ಯೋಗ ಕಲ್ಪಿಸುವ ಉದ್ದೇಶ ಹೊಂದಲಾಗಿದೆ. ಈ ನಿಟ್ಟಿನಲ್ಲಿ ಕೈಗಾರಿಕೋದ್ಯಮಗಳು ಸರ್ಕಾರದೊಂದಿಗೆ ಕೈ ಜೋಡಿಸಬೇಕು. ವಿದ್ಯಾರ್ಥಿಗಳಿಗೆ ತಮ್ಮ ಕೈಗಾರಿಕೆಗಳಲ್ಲಿ ತರಬೇತಿಗೆ ಅವಕಾಶ ಮಾಡಿಕೊಡಬೇಕು ಎಂದು ಸುಧಾಕರ್ ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಎಫ್‌ಕೆಸಿಸಿಐ ಅಧ್ಯಕ್ಷರಾದ ರಮೇಶ್ ಚಂದ್ರ ಲಹೋಟಿ, ಮಂಥನ್ – 2024 ರ ಅಧ್ಯಕ್ಷರಾದ ಕೀರ್ತನ್ ಕುಮಾರ್ ಎಂ, ಉಪಾಧ್ಯಕ್ಷರಾದ ಉಮಾ ರೆಡ್ಡಿ, ಹಿರಿಯ ಉಪಾಧ್ಯಕ್ಷರಾದ ಎಂ.ಜಿ ಬಾಲಕೃಷ್ಣ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಸಿಂದಗಿ ಬಿಜೆಪಿ ಮಂಡಲ ವತಿಯಿಂದ ಬೃಹತ್ ಪ್ರತಿಭಟನೆ

**ವರದಿ:ಲಾಲಸಾಬ ಸವಾರಗೋಳ**




**ವಿಜಯಪುರ :** ಸಿಂದಗಿ ತಾಲ್ಲೂಕಿನ ಬಿಜೆಪಿ ಮಂಡಲ ವತಿಯಿಂದ ಹಮ್ಮಿಕೊಂಡಿದ್ದ ಗಂಗಾ ಕಲ್ಯಾಣ ಬೋರ್ ವೆಲ್ ಎಸ್ಸಿ / ಎಸ್ಟಿ 2022 –2023 ಸಾಲಿನ ಫಲಾನುಭವಿಗಳನ್ನು ಬದಲಾವಣೆ ಮಾಡಬಾರದು ಎಂದು ಆಗ್ರಹಿಸಿ ಬೃಹತ್ ಪ್ರತಿಭಟನೆ ಮಾಡಲಾಯಿತು. ಈ ಸಂದರ್ಭದಲ್ಲಿ ರಾಂಪೂರ ಆರೂಢ ಮಠದಿಂದ ಪ್ರತಿಭಟನೆ ಮೆರವಣಿಗೆ ಮೂಲಕ ಕೃಷ್ಣಾ ಭಾಗ್ಯ ಜಲ ನಿಗಮದ ಕಚೇರಿವರೆಗೆ ಸಾಗಿ ಸುಮಾರು ಗಂಟೆಗಳ ಕಾಲ ಧರಣಿ ಸತ್ಯಾಗ್ರಹ ಆರಂಭಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಶ್ರೀ ರಮೇಶ ಭೂಸನೂರ ದೀನ ದಲಿತರಿಗೆ ಸ್ಥಳೀಯ ಶಾಸಕರು ಅನ್ಯಾಯ ಮಾಡುತ್ತಿದ್ದಾರೆ. ಇದನ್ನು ನಾವು ಖಂಡಿಸುತ್ತೇವೆ ಹಾಗೂ ಇದೇ ರೀತಿ ದ್ವೇಷದ ರಾಜಕಾರಣ ಮಾಡಿದರೆ ಇನ್ನೂ ಹೆಚ್ಚಿನ ಉಗ್ರವಾದ ಹೋರಾಟಕ್ಕೆ ಅಣಿಯಾಗಬೇಕಾಗುವುದು ಎಂದು ಶಾಸಕ–ರಿಗೆ ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಮಂಡಲ ಅಧ್ಯಕ್ಷ ಸಂತೋಷ ಪಾಟೀಲ ಮಾತನಾಡಿ ಈ ತಾಲ್ಲೂಕಿನ ಹಳೆಯ ಕಾಮಗಾರಿ ಹಾಗೂ ಟೆಂಡರ್ ರದ್ದು ಮಾಡುವ ಪ್ರವೃತ್ತಿ ಬಿಡಬೇಕು. ಫಲಾನುಭವಿಗಳಿಗೆ ಅನ್ಯಾಯ ಮಾಡಿದರೆ, ಮುಂದಿನ ದಿನಗಳಲ್ಲಿ ಅಹೋರಾತ್ರಿ ಧರಣಿ ಸತ್ಯಾಗ್ರಹ ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಸಿದ್ದೂ ಬುಳ್ಳಾ, ಗುರು ತಳವಾರ, ಶ್ರೀಕಾಂತ ಬಿಜಾಪುರ, ಶಂಕರ ಬಗಲಿ ಮಾತನಾಡಿದರು. ಈ ಸಂದರ್ಭದಲ್ಲಿ ರವಿ ನಾಯ್ಕೋಡಿ, ಶಿವನಗೌಡ ಬಿರಾದಾರ, ಪ್ರಶಾಂತ ಕದ್ದರಕಿ, ಸಂತೋಷ ಮಣಗೀರಿ, ಪೀರೂ ಕೆರೂರ, ನಾಗಪ್ಪ ಶಿವೂರ, ಸಿದ್ರಾಮ ಆನಗೊಂಡ, ಮಡಿವಾಳಪ್ಪಗೌಡ ಬಿರಾದಾರ, ಶ್ರೀಶೈಲ ಚಳ್ಳಗಿ, ಮಲ್ಲನಗೌಡ ಬಿರಾದಾರ, ಯಲ್ಲು ಇಂಗಳಗಿ, ಪ್ರಧಾನಿ ಮೂಲಿಮನಿ, ಶಮೀ ಬಿಜಾಪುರ, ವಿಠಲ ಪೂಜಾರಿ, ರಜಾಕ ಮುಜಾವರ, ಕಾಜು ಬಂಕಲಗಿ ಹಾಗೂ ನೂರಾರು ಕಾರ್ಯಕರ್ತರು ಭಾಗವಹಿಸಿದ್ದರು.

# ಪುಸ್ತಕದಲ್ಲಿ ತಲೆಹಾಕು: ತಲೆಯೆತ್ತಿ ನಿಲ್ಲುವೆ: ಸುಖದೇವ ಕಾಂಬಳೆ



**ರಾಯಬಾಗ :** ಪುಸ್ತಕಗಳ ಗೆಳೆಯರಾಗಿ ಪುಸ್ತಕದಲ್ಲಿ ತಲೆಹಾಕಿದರೆ ವಿಶ್ವದಲ್ಲಿ ತಲೆಯೆತ್ತಿ ನಿಲ್ಲಲು ಸಾಧ್ಯವೆಂದು ಶಿಕ್ಷಕ, ಸಾಹಿತಿ ಸುಖದೇವ ಕಾಂಬಳೆ ಹೇಳಿದರು. ಸಮೀಪದ ಚಿಕ್ಕೂಡ ಗ್ರಾಮದ ಸರಕಾರಿ ಪ್ರೌಢ ಶಾಲೆಯಲ್ಲಿ ಹಮ್ಮಿಕೊಂಡ ಹತ್ತನೆಯ ತರಗತಿ ವಿದ್ಯಾರ್ಥಿಗಳ ಬೀಳ್ಕೊಡುವ ಸಮಾರಂಭ ಮತ್ತು ವಾರ್ಷಿಕ ಸ್ನೇಹ ಸಮ್ಮೇಳನದ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಮೊಬೈಲ್ ಗಳ ದಾಸರಾಗದೇ ಅಕ್ಷರ ಪ್ರೇಮಿಗಳಾಗಿ ಬದುಕು ಉಜ್ವಲಗೊಳಿಸಿ ಕೊಳ್ಳಬೇಕೆಂದು ಕರೆಕೊಟ್ಟರು. ಸದ್ದಿಲ್ಲದೇ ಸತತ ಪ್ರಯತ್ನ? ಸಮಯಪ್ರಜ್ಞೆ?ಏ–ಕಾಗ್ರತೆಯಿಂದ ಮುನ್ನಡೆದು ಶಾಲೆಯ ಕೀರ್ತಿ ಪಸರಿಸಬೇಕೆಂದು ಆಶಿಸಿದರು.

ರವಿ ಮಾಚಕನೂರ ಮಾತನಾಡಿ ಗುರುಗಳ ಹೃದಯಗಳಲ್ಲಿ ಅಮೃತಾನಂದದ ಬಿಂದುಗಳನ್ನು ಬಿತ್ತಲು ಸಾಧನೆ ಮಾಡಿ ಗೆಲುವು ಪಡೆಯಿರೆಂದು ಹಾರೈಸಿದರು.

ಎಸ್.ಡಿ.ಎಮ್.ಸಿ. ಅಧ್ಯಕ್ಷ ಲಕ್ಷ್ಮಣ ಪಾಟೀಲ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ರವೀಂದ್ರ ಮುಳ್ಳೂರ, ರಾಮಣ್ಣ ಮುಗಳಖೋಡ, ರಾಮಣ್ಣ ಕತ್ತಿ, ರಮೇಶ ಬಡಿಗೇರ, ರಾಜಶ್ರೀ ತೇಲಿ, ಶಿವಾನಂದ ತೇಲಿ, ಹಣಮಂತ ಕುಳಲಿ, ರಾಮನಗೌಡ ರಾಮತೀರ್ಥ, ಭುಜಬಲಿಗೌಡ ರಾಮತೀರ್ಥ, ಅಲ್ಲಪ್ಪ ಮುಳ್ಳೂರ, ಲಲಿತಾ ವಡ್ಡರ, ರುಬಾಬಿ ಕಾಗವಾಡೆ, ಲಕ್ಷ್ಮೀಬಾಯಿ ವಡ್ಡರ , ರಾಜೇಂದ್ರ ಕುಮಟಿ, ಮಾಂತಯ್ಯ ಮಠಪತಿ, ಶಿಕ್ಷಕರು, ಹಳೆಯ ವಿದ್ಯಾರ್ಥಿಗಳು , ಪಾಲಕರು ಉಪಸ್ಥಿತರಿದ್ದರು.

ಸಾವಿತ್ರಿ ಮಾಳಿ , ಮುತ್ತುರಾಜ ಬಿರಾದರ ಆದರ್ಶ ವಿದ್ಯಾರ್ಥಿಗಳಾಗಿ ಸನ್ಮಾನಕ್ಕೆ ಭಾಜನರಾದರು. ರವಿ ರಡ್ರಟ್ಟಿ, ನಿಂಗಪ್ಪ ಹಲಕಿ, ಟಿ. ವಿ. ಚವ್ಹಾಣ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಮುಖ್ಯೋಪಾಧ್ಯಾಯ ರವೀಂದ್ರ ಪಾಟೀಲ ಅಧ್ಯಕ್ಷೀಯ ಪರ ನುಡಿಗಳನ್ನಾಡಿದರು.

ಸಾವನಕುಮಾರ ಗಸ್ತಿ ಪ್ರಾಸ್ತಾವಿಕ , ದಾವಲಸಾಬ ಅರಳಿಕಟ್ಟಿ ವರದಿ ವಾಚಿಸಿದರು. ಪ್ರಿಯಾ ಮುದವಿ ಸ್ವಾಗತಿಸಿದರು. ಸಹನಾ ಕತ್ತಿ, ಶಿಲ್ಪಾ ವಡ್ಡರ ನಿರೂಪಿಸಿದರು. ಅಕ್ಷಯ ಜಗದಾಳ ವಂದಿಸಿದರು.

**ವರದಿ:ಡಾ.ಜಯವೀರ ಎ ಕೆ.**

# ಸರ್ಕಾರಿ ಸೌಲಭ್ಯಗಳನ್ನು ಸದ್ಬಳಕೆ ಮಾಡಿಕೊಳ್ಳಿ




**ರಬಕವಿ–ಬನಹಟ್ಟಿ :** ಸರ್ಕಾರದಿಂದ ಪಡೆದುಕೊಂಡ ಸೌಲಭ್ಯಗಳನ್ನು ಫಲಾನುಭವಿಗಳು ಸದ್ಬಳಕೆ ಮಾಡಿಕೊಂಡು ಉತ್ತಮ ಜೀವನ ಸಾಗಿಸಬೇಕು ಎಂದು ಶಾಸಕ ಸಿದ್ದೂ ಸವದಿ ತಿಳಿಸಿದರು.

ಮಂಗಳವಾರ ಇಲ್ಲಿನ ನಗರಸಭೆಯ ಸಭಾ ಭವನದಲ್ಲಿ 2021–22 ನೇ ಸಾಲಿನ ಡಾ. ಬಿ. ಆರ್. ಅಂಬೇಡ್ಕರ್ ನಿವಾಸ ಮತ್ತು ವಾಜಪೇಯಿ ಮನೆ ಮಂಜೂರಾತಿ ಮತ್ತು ಕಾಮಗಾರಿ ಆದೇಶ ಪ್ರತಿಗಳನ್ನು ವಿತರಣೆ ಮಾಡಿ ಮಾತನಾಡಿದರು.

206 ಮನೆಗಳಿಗೆ ಮಂಜೂರಾತಿ ದೊರೆತಿದ್ದು , 191 ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ. ರಾಜ್ಯ ಸರ್ಕಾರ ರೂ. 1,20,000 ಸಾವಿರ ಮತ್ತು ಕೇಂದ್ರ ಸರ್ಕಾರ ರೂ. 1,50,000 ಸಾವಿರ ಸಹಾಯ ಧನವನ್ನು ನೀಡುತ್ತದೆ. ಆದ್ದರಿಂದ ಫಲಾನುಭವಿಗಳು ಸರ್ಕಾರದ ಆದೇಶದಂತೆ ಮತ್ತು ಅಧಿಕಾರಿಗಳ ಸೂಕ್ತ ಮಾರ್ಗದರ್ಶನ ಪಡೆದುಕೊಂಡು ಉತ್ತಮ ಮನೆಗಳನ್ನು ನಿರ್ಮಾಣ ಮಾಡಿಕೊಳ್ಳಬೇಕು ಎಂದು ಶಾಸಕ ಸಿದ್ದೂ ಸವದಿ ತಿಳಿಸಿದರು.

ಪೌರಾಯುಕ್ತ ಜಗದೀಶ ಈಟಿ, ನಗರಸಭೆಯ ಸದಸ್ಯರಾದ ಸಂಜಯ ತೆಗ್ಗಿ, ಶ್ರೀಶೈಲ ಬೀಳಗಿ, ಪ್ರಭಾಕರ ಮೋಳೆದ, ಸದಾಶಿವ ಪರೀಟ, ಪ್ರವೀಣ ಧಬಾಡಿ, ರವಿ ಕೊರ್ತಿ, ದುರ್ಗವ್ವ ಹರಿಜನ, ಗೌರಿ ಮಿಳ್ಳಿ, ಶಶಿಕಲಾ ಸಾರವಾಡ, ಸುರೇಶ ಬಾಗೇವಾಡಿ, ಮುಖೇಶ ಬನಹಟ್ಟಿ, ಅರುಣ ಬುದ್ನಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಹಳ್ಳಗಳನ್ನು ಸ್ವಚ್ಚಗೊಳಿಸಿದ ನಗರಸಭೆ ಹಳ್ಳಗಳಲ್ಲಿ ಯಾವುದೆ ತ್ಯಾಜ್ಯವನ್ನು ಹಾಕಬಾರದು



**ರಬಕವಿ–ಬನಹಟ್ಟಿ:** ಸ್ಥಳೀಯ ನಗರಸಭೆಯ ವ್ಯಾಪ್ತಿಯಲ್ಲಿ ಬರುವ ಬನಹಟ್ಟಿ ಮತ್ತು ರಾಮಪುರದ ಹಳ್ಳಗಳನ್ನು ನಗರಸಭೆಯ ಅಧಿಕಾರಿಗಳು ಸ್ವಚ್ಛಗೊಳಿಸಿದ್ದು, ಇದ–ರಿಂದಾಗಿ ಸಾಕಷ್ಟು ತ್ಯಾಜ್ಯಗಳಿಂದ ಕೂಡಿದ್ದ ಹಳ್ಳಗಳು ಈಗ ಸ್ವಚ್ಛಗೊಂಡಂತಾಗಿವೆ.

ಬನಹಟ್ಟಿ ಹಳ್ಳದಲ್ಲಿ ಸಾಕಷ್ಟು ಪ್ರಮಾಣದಲ್ಲಿ ಜಾಲಿ ಗಿಡಗಳು ಬೆಳೆದಿದ್ದವು. ಸ್ಥಳೀಯ ಸಾರ್ವಜನಿಕರು ಅಪಾರ ಪ್ರಮಾಣದಲ್ಲಿ ತ್ಯಾಜ್ಯವನ್ನು ಸುರಿದು ಹೋಗುತ್ತಿದ್ದರು. ಅದರಲ್ಲೂ ಮೀನು ಮಾರಾಟಗಾರರು, ಮಾಂಸದ ಅಂಗಡಿಯವರು, ಉಳಿದ ಮೀನು ಮತ್ತು ಮಾಂಸದ ತುಂಡುಗಳನ್ನು ಎಸೆದು ಹೋಗುತ್ತಿದ್ದರು. ಸಾರ್ವಜನಿಕರು ಮನೆಯಲ್ಲಿ ಬೇಡವಾದ ವಸ್ತುಗಳನ್ನು ಹಳ್ಳದಲ್ಲಿ ಸುರುವಿ ಹೋಗುತ್ತಿದ್ದರು. ಇದರಿಂದಾಗಿ ಈ ಪ್ರದೇಶ ಗಬ್ಬೆದ್ದು ನಾರುತ್ತಿತ್ತು. ಇದು ನಗರದ ಮಧ್ಯ ಭಾಗದಲ್ಲಿರುವುದರಿಂದ ಸಾರ್ವಜನಿಕರಿಗೆ, ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ, ಬಸ್ ಪ್ರಯಾಣಿಕರಿಗೆ ಬಹಳಷ್ಟು ತೊಂದರೆ ಮಾಡುತ್ತಿತ್ತು. ಮೂರು ದಶಕಗಳ ಹಿಂದೆ ಬನಹಟ್ಟಿ ಹಳ್ಳ ಇಲ್ಲಿನ ಜನರಿಗೆ ನೀರಿನ ಮೂಲವಾಗಿತ್ತು. ಈ ಹಳ್ಳದ ನೀರು ಕೃಷ್ಣಾ ನದಿಯನ್ನು ಸೇರುತ್ತಿತ್ತು. ಈಗ ಹಳ್ಳವನ್ನು ಸ್ವಚ್ಛಗೊಳಿಸಿದ್ದರಿಂದ ಸಾರ್ವಜನಿಕ–ರಿಗೆ ಬಹಳಷ್ಟು ಅನುಕೂಲವಾಗಿದೆ. ರಾಮಪುರ ಹಳ್ಳವೂ ಕೂಡಾ ರಬಕವಿ ಮತ್ತು ರಾಮಪುರದ ಮಧ್ಯ ಭಾಗದಲ್ಲಿದ್ದು ಸಧ್ಯ ಇದನ್ನು ಕೂಡಾ ನಗರಸಭೆಯವರು ಸ್ವಚ್ಛಗೊಳಿಸಿದ್ದರಿಂದ ಜನರಿಗೆ ಅನುಕೂಲವಾಗಿದೆ.

ಸ್ಥಳೀಯ ಸಾರ್ವಜನಿಕರು ಮುಂದಿನ ದಿನಗಳಲ್ಲಿ ಈ ಹಳ್ಳಗಳಲ್ಲಿ ಯಾವುದೇ ರೀತಿಯ ತ್ಯಾಜ್ಯಗಳನ್ನು ಹಾಕಬಾರದು. ನೀರಿನ ಮೂಲಗಳನ್ನು ಹಾಳು ಮಾಡದೆ ಅವುಗಳನ್ನು ಸ್ವಚ್ಛವಾಗಿಟ್ಟುಕೊಳ್ಳುವಲ್ಲಿ ಸಾರ್ವಜನಿಕರ ಸಹಕಾರ ಮುಖ್ಯವಾಗಿದೆ ಎಂದು ಪೌರಾಯುಕ್ತ ಜಗದೀಶ ಈಟಿ ತಿಳಿಸಿದರು.

# ಎನ್‌ಟಿಪಿಸಿಯಿಂದ ಐ.ಟಿ.ಐ. ಸಂಸ್ಥೆಗೆ 90 ಲಕ್ಷ ರೂ. ಅನುದಾನ

## ವಿದ್ಯಾರ್ಥಿಗಳ ಸರ್ವೋತ್ತಮ ಅಭಿವೃದ್ದಿಗಾಗಿ ಎರಡು ಅಂತಸ್ತಿನ ಕಟ್ಟಡ ನಿರ್ಮಾಣ

**ವರದಿ: ಲಾಲಸಾಬ ಸವಾರಗೋಳ**



**ವಿಜಯಪುರ :** ನಗರದ ಐ.ಟಿ.ಐ ಸಂಸ್ಥೆಗೆ ಕೂಡಗಿಯ ಎನ್.ಟಿ.ಪಿ.ಸಿ. ವಿದ್ಯುತ್ ಸ್ಥಾವರವು ವಿದ್ಯಾರ್ಥಿಗಳ ಸರ್ವೋತ್ತಮ ಅಭಿವೃದ್ಧಿಗಾಗಿ ಎರಡು ಅಂತಸ್ಥಿನ ಕಟ್ಟಡ ನಿರ್ಮಿಸಲು 90 ಲಕ್ಷ ರೂ ಅನುದಾನ ಒದಗಿಸಲಾಗಿದೆ ಎಂದು ನಗರ ಶಾಸಕರಾದ ಬಸನಗೌಡ ಪಾಟೀಲ (ಯತ್ನಾಳ) ಹೇಳಿದರು.

ನಗರದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಜಿಲ್ಲಾಡಳಿತ ಹಾಗೂ ಎನ್.ಟಿ.ಪಿ.ಸಿ. ಸಹಯೋಗದಲ್ಲಿ ಆರ್ ಮತ್ತು ಆರ್ ಯೋಜನೆಯಡಿ ವಿಜಯಪುರ ಜಿಲ್ಲೆಯ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಸಿ.ಓ.ಇ ಕಟ್ಟಡದ ಮೊದಲನೆಯ ಹಾಗೂ ಎರಡನೆಯ ಮಹಡಿ ಮೇಲೆ ಬೋಧನಾ ಕೊಠಡಿ ಹಾಗೂ ಕಾರ್ಯಾಗಾರ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜಾ ಸಮಾರಂಭದ ಶಂಕು ಸ್ಥಾಪನೆ ಮಾಡಿ ಅವರು ಮಾತನಾಡಿದರು.

ಕೂಡಗಿ ಎನ್.ಟಿ.ಪಿ.ಸಿ.ಯು ಜಿಲ್ಲೆಯಲ್ಲಿ ಈಗಾಗಲೇ ನಗರದಲ್ಲಿ ವಿವಿಧ ಬಡಾವಣೆಗಳಲ್ಲಿ ಗಾರ್ಡನ್ ಅಭಿವೃದ್ಧಿ , ಗಿಡಗಳನ್ನು ಹಚ್ಚುವುದು ಶಾಲಾ ಕಾಲೇಜುಗಳ ಅಭಿವೃದ್ಧಿ ಹಾಗೂ ವಿವಿಧ ವಲಯಗಳಲ್ಲಿ ಜಿಲ್ಲೆಯ ಅಭಿವೃದ್ಧಿಗಾಗಿ ಅನುದಾನ ನೀಡುತ್ತಾ ಬಂದಿದೆ.

ಇದರೊಂದಿಗೆ ಜಿಲ್ಲೆಯ ಸಾರ್ವಜನಿಕರೂ ಸಹಕಾರ ನೀಡುತ್ತಿರುವುದು ಸಂತೋಷದ ವಿಷಯ ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿಗಾಗಿ ಕೂಡಗಿಯ ಎನ್.ಟಿ.ಪಿ.ಸಿ. ಈಗಾಗಲೇ ರೈಲು ನಿಲ್ದಾಣ ನವೀಕರಣ, ರೈಲ್ವೇ ಜೋಡಿ ಹಳಿಗಳ ಜೋಡಣೆ ಹಾಗೂ ವಿದ್ಯುತ್ತೀಕರಣಗೊಳಿಸಲು ಪ್ರಮುಖ ಪಾತ್ರ ವಹಿಸಿದ್ದು, ಜಿಲ್ಲೆಯ ಔದ್ಯೋಗಿಕರಣಕ್ಕೆ ಬಹಳ ಸಹಕಾರಿಯಾಗಿದೆ.

ಕೂಡಗಿಯ ಎನ್.ಟಿ.ಪಿ.ಸಿ ಜಿಲ್ಲೆಯ ಪ್ರಾಥಮಿಕ ಶಾಲೆಗಳಲ್ಲಿ ಶೌಚಾಲಯ ನಿರ್ಮಾಣ, ಶುದ್ಧ ಕುಡಿಯುವ ನೀರಿನ ಘಟಕ, ಸ್ಮಾರ್ಟ್ ಕ್ಲಾಸ ನಡೆಸಲು ಅನುವು ಮಾಡಿಕೊಡುವಂತೆ ಹಾಗೂ ಇಲ್ಲಿ ಕಲಿತ ವಿದ್ಯಾರ್ಥಿಗಳಿಗೆ ತಮ್ಮ ಸಂಸ್ಥೆಯಲ್ಲಿ ಉದ್ಯೋಗ ನೀಡುವಂತೆ ಅವರು ಕೋ–ರಿದರು.

ಎನ್.ಟಿ.ಪಿ.ಸಿ.ಯ ಚೀಫ್ ಜನರಲ್ ಮ್ಯಾನೇಜರ ಬಿದ್ಯಾನಂದ ಝಾ ಮಾತನಾಡಿ ಇಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳು ನಮ್ಮ ದೇಶದ ಪ್ರಗತಿಗೆ ಕೈಜೋಡಿಸಬೇಕು. ನಿಮ್ಮ ಶಕ್ತಿ, ಜ್ಞಾನದಿಂದ ನಮ್ಮ ದೇಶ ಬಲಾಢ್ಯವಾಗಬಲ್ಲದು. ಜಿಲ್ಲೆಯಲ್ಲಿ ಶಿಕ್ಷಣ, ಆರೋಗ್ಯ ಮತ್ತು ಮೂಲಭೂತ ಸೌಕರ್ಯಕ್ಕಾಗಿ ಹಾಗೂ ಈ ಸಂಸ್ಥೆಯ ಅಭಿವೃದ್ಧಿಗಾಗಿ ಎನ್.ಟಿ.ಪಿ.ಸಿ ಸಂಸ್ಥೆಯು ಸದಾ ನಿಮ್ಮೊಂದಿಗೆ ಕೈ ಜೋಡಿಸುವುದಾಗಿ ಅವರು ಹೇಳಿದರು.

ಶೆಡ್ ನಿರ್ಮಾಣಕ್ಕೆ ಭೂಮಿಪೂಜೆ : ವಿಜಯಪುರದ ಎನ್.ಸಿ.ಸಿ. ಆವರಣದಲ್ಲಿ ವಿದ್ಯಾರ್ಥಿನಿಯರಿಗೆ ನಿರ್ಮಿಸಲಾಗುತ್ತಿರುವ ಶೆಡ್ ನಿರ್ಮಾಣಕ್ಕೆ ಜಿಲ್ಲಾಧಿಕಾರಿ ಟಿ. ಭೂಬಾಲನ್ ಹಾಗೂ ಕೂಡಗಿ ಎನ್ಟಿಪಿಸಿಯ ಮುಖ್ಯ ಪ್ರಧಾನ ವ್ಯವಸ್ಥಾಪಕರಾದ ಬಿದ್ಯಾನಂದ ಝಾ ಅವರು ಜಂಟಿಯಾಗಿ ಭೂಮಿ ಪೂಜೆ ನೆರವೇರಿಸಿದರು.

ಜಿಲ್ಲಾಧಿಕಾರಿ ಟಿ. ಭೂಬಾಲನ್ ಮಾತನಾಡಿ ಎನ್.ಸಿ.ಸಿ. ಆವರಣದಲ್ಲಿ ಶೆಡ್ ನಿಮಾ9ಣ–ಕ್ಕಾಗಿ ಕೂಡಗಿ ಎನ್.ಟಿ.ಪಿ.ಸಿ.ಯಿಂದ ಸಿ.ಎಸ್.ಆರ್. ಅನುದಾನದಲ್ಲಿ 70 ಲಕ್ಷ ರೂ.ಗಳನ್ನು ಒದಗಿಸಿದ್ದು , ಜಿಲ್ಲೆಯ ಶಿಕ್ಷಣ, ಆರೋಗ್ಯ, ಮೂಲಭೂತ ಸೌಕರ್ಯವನ್ನು ಅಭಿವೃದ್ಧಿಪಡಿಸಲಾಗುತ್ತಿದೆ. ಜಿಲ್ಲೆಯ ಅಭಿವೃದ್ಧಿಗೆ ಇನ್ನೂ ಅನೇಕ ಕಾರ್ಯಕ್ರಮಗಳನ್ನು ಕೈಗೊಳ್ಳಲು ಅನುದಾನ ನೀಡುವುದಾಗಿ ಅವರು ತಿಳಿಸಿದ್ದಾರೆ ಎಂದು ಹೇಳಿದರು.

ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರಾದ ರಮೇಶ ದೇಸಾಯಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ತಹಶೀಲ್ದಾರ ಕವಿತಾ ಎನ್.ಟಿ.ಪಿ.ಸಿ. ಯ ಜನರಲ್ ಮ್ಯಾನೇಜರ್ ಆಪರೇಶನ್ ಮತ್ತು ಮೆಂಟೆನನ್ಸ ಅಧಿಕಾರಿ ಕೆ. ಕೆ. ದತ್ತಾ ನಿರ್ಮಿತಿ ಕೇಂದ್ರದ ಯೋಜನಾ ನಿರ್ದೇಶಕರಾದ ಜಿ. ಎನ್. ಮಲಜಿ, ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಅಧಿಕಾರಿಗಳು, ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಇತರರು ಉಪಸ್ಥಿತರಿದ್ದರು.

# 20 ವರ್ಷ ಸೇವೆ ಪೂರ್ಣಗೊಂಡ ಹಿನ್ನಲೆ ಬಡ ಮಕ್ಕಳಿಗೆ ನೋಟಬುಕ್ ವಿತರಿಸಿದ ಶಿಕ್ಷಕ



**ತೇರದಾಳ :** ಇಲ್ಲಿನ ಜೆವಿ ಮಂಡಳ ಎಸ್.ಎಂ. ಪ್ರೌಢಶಾಲೆಯಲ್ಲಿ ಸೇವೆ ಸಲ್ಲಿಸುತ್ತಿರುವ ನೇಮಿನಾಥ ಜಮಖಂಡಿ ತಮ್ಮ ಶೈಕ್ಷಣಿಕ ಕ್ಷೇತ್ರದಲ್ಲಿ 20 ವರ್ಷಗಳ ಕಾಲ ಸೇವೆ ಸಲ್ಲಿಸಿದ ನಿಮಿತ್ತ ಸಂಸ್ಥೆಯಲ್ಲಿನ ಬಡ ಮಕ್ಕಳಿಗೆ ನೋಟಬುಕ್ ಪೆನ್ನ ವಿತರಣೆ ಮಾಡುವ ಮೂಲಕ ಶಿಕ್ಷಣ ಪ್ರೇಮಕ್ಕೆ ಸಾಕ್ಷಿಯಾದರು.

ಈ ಸಂದರ್ಭದಲ್ಲಿ ಮಾತನಾಡಿದ ಸಂಸ್ಥೆಯ ಸ್ವತಂತ್ರ ಪಿಯು ಕಾಲೇಜ್ ಪ್ರಾಚಾರ್ಯ ಸಂತೋಷ ಕುಳ್ಳಿ, ಶಿಕ್ಷಣ ಕಲಿಯುವ ಆಸಕ್ತಿ ಇದ್ದರು ಕುಟುಂಬದಲ್ಲಿನ ಕಡು ಬಡತನ ಕೆಲವರಿಗೆ ಕಲಿಯಲು ಬಿಡುವುದಿಲ್ಲ. ಅಂತಹವರನ್ನು ಗುರುತಿಸಿ ಸಹಾಯಕ್ಕೆ ಮುಂದೆ ಬರಬೇಕಾದದ್ದು ಪ್ರತಿಯೊಬ್ಬರ ಕರ್ತವ್ಯವಾಗಿದೆ. ಆ ದಿಸೆಯಲ್ಲಿ ಶಿಕ್ಷಕ ನೇಮಿನಾಥ ಜಮಖಂಡಿ ಅವರ ಕಾಳಜಿ ಶ್ಲಾಘನೀಯವಾಗಿದೆ ಎಂದು ಬಣ್ಣಿಸಿದರು. ವಿದ್ಯಾರ್ಥಿನಿ ಮಾಯಕ್ಕ ಮಾಂಗ, ಕಲಿಯಬೇಕೆಂಬ ಆಸೆ ಸಾಕಷ್ಟು ಇದೆ. ಆದರೆ ಮನೆಯಲ್ಲಿನ ಪರಸ್ಥಿತಿ ಚನ್ನಾಗಿಲ್ಲ. ನಾನು ಶಾಲೆ ಬಿಡಬೇಕೆಂದು ನಿರ್ಧ–ರಿಸಿದ್ದೆ. ಆದರೆ ಜಮಖಂಡಿ ಶಿಕ್ಷಕರ ಪ್ರೋತ್ಸಾಹ ಮತ್ತು ಸಹಾಯದಿಂದ ಅನುಕೂಲಕರವಾಗಿದೆ. ಎಂ.ಪಿ. ಸವದತ್ತಿ, ಎಸ್.ಪಿ. ದೊಡವಾಡ ಇದ್ದರು.

# ಜ್ಞಾನಕ್ಕಿಂತ ಮಿಗಿಲಾದುದು ಯಾವುದು ಇಲ್ಲ: ಆಯುಕ್ತ ಬಿ.ಎ. ಸೌದಾಗರ



**ವಿಜಯಪುರ** : ಜ್ಞಾನಕ್ಕಿಂತ ಮಿಗಿಲಾದುದು ಯಾವುದು ಇಲ್ಲ ಎಲ್ಲ ಕಡೆ ಶಿಕ್ಷಣವಂತರಿಗೆ ಮಾತ್ರ ಬೆಲೆಯಿದ್ದು, ಪ್ರತಿಯೊಬ್ಬರೂ ಉತ್ತಮ ಶಿಕ್ಷಣವಂತರಾಗಿ ಸಮಾಜಮುಖಿ ಜೀವನ ರೂಪಿಸಿಕೊಳ್ಳಬೇಕೆಂದು ಮಹಾನಗರ ಪಾಲಿಕೆ ಆಯುಕ್ತ ಬಿ.ಎ. ಸೌದಾಗರ ಹೇಳಿದರು.

ನಗರದ ಮನಗೂಳಿ ಅಗಸಿ ಹತ್ತಿರದ ಫತ್ತೇ ದರವಾಜಾ ಮಸೀದಿ ಜಮಾತ್ ವತಿಯಿಂದ ವಕ್ಫ ಸಲಹಾ ಸಮಿತಿ ಪದಾಧಿಕಾರಿಗಳು ಹಾಗೂ ಚಿನ್ನದ ಪದಕ ಪಡೆದ ಸಾಧಕರಿಗೆ ಹಮ್ಮಿಕೊಂಡ ಸನ್ಮಾನ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಉತ್ತಮ ಶಿಕ್ಷಣದಿಂದಲೇ ನಮ್ಮ ಜೀವನ ರೂಪಗೊಳ್ಳುವುದು ಸಮಾಜದಲ್ಲಿ ಹುದ್ದೆಗಳು ಸಿಗಬೇಕೆಂದರೆ ಜ್ಞಾನವಂತರಾಗಿರಬೇಕು ಎಂದರು.

ಮುಖ್ಯ ಅತಿಥಿಗಳಾಗಿದ್ದ ಮಹಾನಗರ ಪಾಲಿಕೆ ಮಾಜಿ ಮೇಯರ್ ಸಜ್ಜಾದೆಪೀರಾ ಮುಶ್ರೀಫ್ ಹಾಗೂ ಜಿಲ್ಲಾ ವಕ್ಫ ಕಮೀಟಿಯ ಉಪಾಧ್ಯಕ್ಷ ಅಲ್ತಾಫ ಲಕ್ಕೂಂಡಿ ಮಾತನಾಡಿ, ನಮ್ಮ ಸಮಾಜದಲ್ಲಿ ಸಾಕಷ್ಟು ಶಿಕ್ಷಣದ ಕೊರತೆಯಿದೆ. ಒಂದೊತ್ತು ಊಟ ಕಡಿಮೆ ಮಾಡಿಯಾದರೂ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಸಬೇಕೆಂದರು. ಸನ್ಮಾನ ಸ್ವೀಕರಿಸಿ ಮಾತನಾಡಿದ ಜಿಲ್ಲಾ ವಕ್ಫ ಕಮೀಟಿ ನೂತನ ಚೇರಮನ್ ನಿಯಾಜ ಕೌಸರ್ ಇನಾಮದಾರ ನನ್ನ ಅಧಿಕಾರವಧಿಯಲ್ಲಿ ಜಿಲ್ಲಾ ವಕ್ಫ ಕಮೀಟಿ ವ್ಯವಸ್ಥೆಯನ್ನು ಬದಲಾಯಿಸುತ್ತೇನೆ. ಸರಕಾರದಿಂದ ಬರುವ ಸೌಲಭ್ಯಗಳನ್ನು ಅರ್ಹರಿಗೆ ತಲುಪಿಸಲು ಪ್ರಮಾಣಿಕ ಪ್ರಯತ್ನ ಮಾಡುತ್ತೇನೆ. ವಕ್ಫ ಆಸ್ತಿ ಸಂರಕ್ಷಣೆಗೆ ವಿಶೇಷ ಕಾಳಜಿ ವಹಿಸಿ ಮಾಡುತ್ತೇನೆ ಎಂದರು. ಅಧ್ಯಕ್ಷತೆ ವಹಿಸಿದ್ದ ಖ್ಯಾತ ನ್ಯಾಯವಾದಿ ಎ ಎಂ ತಾಂಬೋಳಿ ವಕ್ಫ ಆಸ್ತಿ ದೇವರ ಆಸ್ತಿಯಾಗಿದೆ. ಯಾರೊಬ್ಬರೂ ದುರುಪಯೋಗ ಪಡಿಸಿಕೊಳ್ಳಬಾರದು ಅದರ ಸಂರಕ್ಷಣೆ ನಮ್ಮೆಲ್ಲರ ಆದ್ಯ ಕರ್ತವ್ಯವಾಗಬೇಕೆಂದರು. ಕಾರ್ಯಕ್ರಮ ಸಂಘಟಕ ದಿನಪತ್ರಿಕೆಗಳ ಸಂಪಾದಕರ ಸಂಘದ ಜಿಲ್ಲಾ ಅಧ್ಯಕ್ಷ ಇರಫಾನ್ ಶೇಖ ಪ್ರಸ್ತಾವಿಕವಾಗಿ ಮಾತನಾಡಿ, ಇಂತಹ ಕಾರ್ಯಕ್ರಮಗಳಿಂದ ಪ್ರತಿಯೊಬ್ಬರಲ್ಲಿ ಸಾಧಿಸಬೇಕೆಂಬ ಛಲ ಮೂಡುತ್ತದೆ ಎಲ್ಲರಿಗೂ ಜಾಗೃತಿಯಾಗಲಿ ಎಂದು ಆಯೋಜಿಸಲಾಗಿದೆ ಎಂದರು.

ವೇದಿಕೆ ಮೇಲೆ ಶಿಕ್ಷಕ-ಸಾಹಿತಿ ಕಬೂಲ್ ಕೊಕಟನೂರ, ಗಣ್ಯರಾದ ನೂರಹಮ್ಮದ ಅತ್ತಾರ, ನ್ಯಾಯವಾದಿ ಅಸ್ಲಾಂ ಅತ್ತಾರ, ರಾಜೀವಗಾಂದಿ ಆರೋಗ್ಯ ವಿವಿಯಿಂದ ಚಿನ್ನದ ಪದಕ ಪಡೆದ ದಿಲಶಾದ್ ಬಣಗಾರ ಮಾತನಾಡಿದರು. ಆಶೀಫ ಬಣಗಾರ, ಮುದಸ್ಸರ ಖುರೇಶಿ, ಆಬಿದ್ ಇಮಾರತವಾಲೆ, ಶೈಕತ್ ಇನಾಮದಾರ, ರಶೀದ ಇನಾಮದಾರ, ಸಲೀಮ್ ಇನಾಮದಾರ, ಗಫೂರ ಇಮಾರತವಾಲೆ, ಮುನ್ನಾ ಮುಲ್ಲಾ, ಇಸಾಕ್ ಲಕ್ಕುಂಡಿ, ಅಪ್ಪು ನಾಗಠಾಣ, ಮೊಮೀನ್ ಸರ್, ಸಮದ ಮದಭಾವಿ, ರಹಿಮಾ ಮೊಮೀನ್, ಹಾಜಿ ಪಿಂಜಾರ, ಆಶೀಪ್ ಕನ್ನೂರ, ಹನೀಪ ಕನ್ನೂರ, ಬಿಸ್ಮಿಲ್ಲಾ ಲಕ್ಕುಂಡಿ, ಚಾಂದ ಮುಲ್ಲಾ, ಗುಡುಲಾಲ ಟುಬಾಕೆ ಸೇರಿದಂತೆ ವಾರ್ಡಿನ ಹಿರಿಯರು, ಮಹಿಳೆಯರು, ಸಾರ್ವಜನಿಕರು ಪಾಲ್ಗೊಂಡಿದ್ದರು.

# ಸಿವಿಲ್ ನ್ಯಾಯಾಧೀಶರಾಗಿ ಆಯ್ಕೆಯಾದ ಜಹೀರ್ ಅತನೂರ ಅಭಿಮತ

# 'ಡಾ. ಅಂಬೇಡ್ಕರ್ ಮಾರ್ಗದಲ್ಲಿ ನಡೆದರೆ ಯಶಸ್ಸು ನಿಶ್ಚಿತ'

**ವಿಜಯಪುರ** : 'ಡಾ. ಬಾಬಾಸಾಹೇಬ ಅಂಬೇಡ್ಕರ್ ಅವರು ತೋರಿದ ಮಾರ್ಗದಲ್ಲಿ ನಡೆದು ಅವರ ತತ್ವ-ಸಿದ್ಧಾಂತಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಯಶಸ್ಸು ನಿಶ್ಚಿತ. ಅದಕ್ಕೆ ನಾನೇ ಜೀವಂತ ಉದಾಹರಣೆ' ಎಂದು ಕರ್ನಾಟಕ ಸಿವಿಲ್ ನ್ಯಾಯಾಧೀಶ ಪರೀಕ್ಷೆಯಲ್ಲಿ ರಾಜ್ಯಕ್ಕೆ ದ್ವಿತೀಯ ಸ್ಥಾನ ಗಳಿಸಿ, ನ್ಯಾಯಾಧೀಶರಾಗಿ ಆಯ್ಕೆಯಾದ ಜಹೀರ್ ಅತನೂರ ಹೇಳಿದರು.

ಬೌದ್ಧ ವಿಹಾರ ನಿರ್ಮಾಣ ಸಮಿತಿ ವತಿಯಿಂದ, ನಗರದ ಸಾರಿಪುತ್ರ-ಬೋಧಿಧಮ್ಮ ಬುದ್ಧ ವಿಹಾರದಲ್ಲಿ, ಹಮ್ಮಿಕೊಳ್ಳಲಾಗಿದ್ದ ಸನ್ಮಾನ ಸಮಾರಂಭದಲ್ಲಿ ಹೃದಯಸ್ಪರ್ಶಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

2016ರಿಂದ ತಾವು ಬುದ್ಧವಿಹಾರದೊಂದಿಗೆ ಸಂಪರ್ಕದಲ್ಲಿದ್ದು ಬಹಳಷ್ಟು ಜೀವನಮಾರ್ಗವನ್ನು ಕಲಿತಿರುವುದನ್ನು ನೆನಪಿಸಿಕೊಂಡ ಜಹೀರ್ ಅತನೂರ, 'ಭಗವಾನ ಬುದ್ಧರು ಮತ್ತು ಡಾ. ಬಾಬಾಸಾಹೇಬರ ವಿಚಾರಗಳಿಂದ ಪ್ರೇರಿತನಾಗಿ, ಅವರ ಮಾರ್ಗದಲ್ಲಿ ಒಂದು ಸಣ್ಣ ಹೆಜ್ಜೆ ಇರಿಸಿದ್ದರ ಪರಿಣಾಮವೇ ನಾನಿಂದು ನ್ಯಾಯಾಧೀಶನಾಗಲು ಕಾರಣವಾಗಿದ್ದು, ಆ ಮಾರ್ಗದಲ್ಲಿ ಸಂಪೂರ್ಣವಾಗಿ ನಡೆದರೆ ಏನೆಲ್ಲ ಸಾಧಿಸಬಹುದು ಎಂಬುದನ್ನು ಅರಿತಿದ್ದೇನೆ. ನನ್ನ ಸೇವಾವಧಿಯಲ್ಲಿ ಇದೆ ಮಾರ್ಗದಲ್ಲಿ ನಡೆದು ಜನಸಾಮಾನ್ಯರಿಗೆ ನ್ಯಾಯ ದೊರಕಿಸಿಕೊಡುತ್ತೇನೆ' ಎಂದು ಹೇಳಿದರು.



ತಮ್ಮ ಸಾಧನೆಯ ಹಾದಿಯಲ್ಲಿ ಮಾರ್ಗದರ್ಶನ ಮಾಡಿದ ಬುದ್ಧ ವಿಹಾರ ನಿರ್ಮಾಣ ಸಮಿತಿಯ ಎಲ್ಲ ಸದಸ್ಯರನ್ನು ತಾವು ಯಾವತ್ತೂ ಮರೆಯಲಾಗದು ಎಂದು ಹೇಳಿದ ಅವರು, ತಾವು ವಕೀಲಿ ವೃತ್ತಿ ಆರಂಭಿಸಿದಾಗ ಎಲ್ಲ ಹಿರಿಯ ನ್ಯಾಯವಾದಿಗಳು ನೀಡಿದ ಸಹಕಾರ ಮತ್ತು ಮಾರ್ಗದರ್ಶನವನ್ನು ಸ್ಮರಿಸಿಕೊಂಡರು.

ಭಗವಾನ ಬುದ್ಧ ಹಾಗೂ ಡಾ. ಅಂಬೇಡ್ಕರ್ ಪ್ರತಿಮೆಗೆ ಪುಷ್ಪಾರ್ಪಣೆ ಮಾಡಿ, ದೀಪ ಬೆಳಗಿಸುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿದ ಹಿರಿಯ ನ್ಯಾಯವಾದಿ ಕೆ.ಎಫ್. ಅಂಕಲಗಿ, ಮಹಾನಗರ ಪಾಲಿಕೆ ಸದಸ್ಯ ಪ್ರೇಮಾನಂದ ಬಿರಾದಾರ ಮಾತನಾಡಿ, ಶಿಕ್ಷಣದ ಮೂಲಕ ಒಬ್ಬ ವ್ಯಕ್ತಿಯು ಸಾಧನೆಯ ಶಿಖರವನ್ನೇರಬಹುದು ಎಂಬುದನ್ನು ಡಾ. ಬಾಬಾಸಾಹೇಬ ಅಂಬೇಡ್ಕರ್ ತೋರಿಸಿಕೊಟ್ಟಿದ್ದಾರೆ. ಅವರು ಬರೆದ ಸಂವಿಧಾನವೇ ದೇಶದ ಶ್ರೇಷ್ಠ ಗ್ರಂಥ, ಅದರ ರಕ್ಷಣೆ ನಮ್ಮೆಲ್ಲರ ಜವಾಬ್ದಾರಿ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಬೌದ್ಧವಿಹಾರ ನಿರ್ಮಾಣ ಸಮಿತಿಯ ಅಧ್ಯಕ್ಷರಾದ ರಾಜಶೇಖರ ಯಡಹಳ್ಳಿ ಮಾತನಾಡಿ, ಕಠಿಣ ಪರಿಶ್ರಮ ಮತ್ತು ಛಲದೊಂದಿಗೆ ತಮ್ಮ ಗುರಿಯನ್ನು ಸಾಧಿಸಿದ ಜಹೀರ ಅತನೂರ ಅವರು ಉಜ್ವಲ ಭವಿಷ್ಯವನ್ನು ಹೊಂದಿದ್ದಾರೆ. ಸಮಾಜದ ಕಟ್ಟಕಡೆಯ ವ್ಯಕ್ತಿಗೆ ನ್ಯಾಯ ದೊರಕುವಂತೆ ಅವರು ಕೆಲಸ ಮಾಡಿ, ಉನ್ನತ ಹುದ್ದೆಗೆ ಏರಲಿ ಎಂದು ಹಾರೈಸಿದರು.

ಬುದ್ಧವಿಹಾರ ಪ್ರಧಾನ ಕಾರ್ಯದರ್ಶಿ ನಾಗರಾಜ ಲಂಬು ಪ್ರಾಸ್ತಾವಿಕ ಮಾತನಾಡಿದರು. ಹಿರಿಯ ನ್ಯಾಯವಾದಿಗಳಾದ ಜಿ.ಎ. ಅತನೂರ, ಎಂ.ಡಿ. ಇಂಡಿಕರ್, ಚಿದಾನಂದ ನಿಂಬಾಳ ವೇದಿಕೆಯಲ್ಲಿದ್ದರು. ರಮೇಶ ಹಾದಿಮನಿ ಸ್ವಾಗತಿಸಿ ನಿರೂಪಿಸಿದರು.

ಈ ಸಂದರ್ಭದಲ್ಲಿ ಕೆ.ಎಂ. ಕೂಡಲಗಿ, ಬಾಬು ಗುಂಡಳ್ಳಿ, ಜಾಫರ ಅಂಗಡಿ, ಸುರೇಶ ಚೂರಿ, ವಿಲಾಸ ವ್ಯಾಸ್, ಮಲ್ಲು ಬನಸೋಡೆ, ರವಿ ಕಿತ್ತೂರ, ರಾಜು ತೊರವಿ, ಅನಿಲ ಹೊಸಮನಿ, ಸಿದ್ದು ಬಿರಾದಾರ, ಈಶ್ವರ ಕಾರಜೋಳ, ಸಂತೋಷ ಸುತಗುಂಡಿ, ಬಿ.ಆರ್. ತಳಕೇರಿ, ಸಂಘರ್ಷ ಹೊಸಮನಿ ಸೇರಿದಂತೆ ವಕೀಲರ ಸಂಘದ ಪದಾಧಿಕಾರಿಗಳು, ಬುದ್ಧವಿಹಾರ ನಿರ್ಮಾಣದ ಸಮಿತಿಯ ಸದಸ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಹಿರಿಯರ ಆಚಾರ ವಿಚಾರ ಬದುಕಿಗೆ ಮಾರ್ಗದರ್ಶಿ: ಆಶು ಕವಿ ಸಿದ್ದಣ್ಣ ಬಿದರಿ

**ಕೊಲ್ಹಾರ** : ದೇಶ ಸುತ್ತು ಕೋಶ ಓದು ಎಂಬಂತೆ ಹಿರಿಯರ ಆಚಾರ ವಿಚಾರಗಳು, ಜೀವನ ಪದ್ಧತಿಗಳು ನಮ್ಮ ಬದುಕಿಗೆ ದಾರಿ ತೋರುವ ಮಾರ್ಗಗಳಿವೆ ಎಂದು ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಆಶು ಕವಿ, ಜನಪದ ಸಾಹಿತ್ಯದ ಗಾರುಡಿಗ ಸಿದ್ದಣ್ಣ ಬಿದರಿ ಹೇಳಿದರು.

ಪಟ್ಟಣದಲ್ಲಿ ಎಸ್.ಕೆ.ಎಂ ಶಿಕ್ಷಣ ಸಂಸ್ಥೆಯ ನವ ಚೈತನ್ಯ ಪೂರ್ವ ಪ್ರಾಥಮಿಕ ಹಾಗೂ ಪ್ರಾಥಮಿಕ ಶಾಲೆಯಲ್ಲಿ ಜರುಗಿದ ವಾರ್ಷಿಕ ಸ್ನೇಹ ಸಮ್ಮೇಳನ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಅವರು ಮಾತನಾಡಿದರು.

ಬದುಕಿನ ಪ್ರತಿ ತಿರುವಿನಲ್ಲೂ ಕೂಡ



ಕಲಿಕೆ ಇದ್ದೆ ಇರುತ್ತದೆ ಎಂದು ತಮ್ಮ ಕವಿಶೈಲಿಯಲ್ಲಿ ಪ್ರಸ್ತುತ ಪಡಿಸಿದರು.

ಈ ಸಂದರ್ಭದಲ್ಲಿ ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ಅಧ್ಯಕ್ಷ ಸ್ಥಾನ ವಹಿಸಿದ್ದ ಶಂಕರ್ ಕಲ್ಯಾಣಿ ಮಾತನಾಡುತ್ತಾ ಅತಿ ವೇಗವಾಗಿ ಪ್ರಗತಿ ಹೊಂದುತ್ತಿರುವ ಜಗತ್ತಿನಲ್ಲಿ ಶಿಕ್ಷಣದ ಪಾತ್ರ ಪ್ರಮುಖವಾಗಿದೆ. ಶಿಕ್ಷಣದಿಂದ ಅನೇಕ ಕ್ರಾಂತಿಕಾರಿ ಅನ್ವೇಷಣೆಗಳಾಗಿ ಜಗತ್ತು ಶರವೇಗದಲ್ಲಿ ಮುನ್ನುಗ್ಗುತ್ತಿದೆ ಹಾಗಾಗಿ ಶಿಕ್ಷಣಕ್ಕೆ ತನ್ನದೇ ಆದಂತಹ ವಿಶೇಷ ಮಹತ್ವವಿದೆ ಎಂದು ಅವರು ಹೇಳಿದರು.

ಅತಿಥಿಗಳಾಗಿ ಶಿಕ್ಷಣ ಸಂಯೋಜಕರಾದ ಜಿ.ಎಸ್ ಗಣಿ, ವಲಯ ಸಮೂಹ ಸಂಪನ್ಮೂಲ ವ್ಯಕ್ತಿಗಳಾದ ಜಿ.ಆಯ್ ಗೋಡ್ಯಾಳ, ಮಂಜುನಾಥ ಮಟ್ಟಿಹಾಳ, ಬಸವರಾಜ ಅಪ್ಪಣ್ಣವರ, ಹಾಗೂ ಇತರರು ಇದ್ದರು.

# ಧಾರವಾಡ ನನ್ನ ನೆಲ; ಈ ನೆಲದ ಪುಣ್ಯ ನಮ್ಮನ್ನು ಎತ್ತರಕ್ಕೆ ಬೆಳೆಸುತ್ತದೆ

## ಹುಟ್ಟಿ, ಬೆಳೆದ ಜಿಲ್ಲೆಯಲ್ಲಿ ಸೇವೆಗೆ ಅವಕಾಶ ಸಿಕ್ಕಿದ್ದು ನನ್ನ ಪುಣ್ಯ: ನಿರ್ಗಮಿತ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ

**ಧಾರವಾಡ** : ಧಾರವಾಡ ನನ್ನ ನೆಲ, ನಾನು ಹುಟ್ಟಿ ಬೆಳೆದ, ಆಡಿ ನಲಿದ, ಅಕ್ಷರ ಕಲಿಸಿದ ಊರು. ಈ ನೆಲದ ಪುಣ್ಯದಿಂದ ನಾವು ಎತ್ತರಕ್ಕೆ ಬೆಳೆಯುತ್ತೇವೆ. ಹುಟ್ಟಿ, ಬೆಳೆದ ಜಿಲ್ಲೆಯಲ್ಲಿ ಜಿಲ್ಲಾಧಿಕಾರಿಯಾಗಿ ಸೇವೆ ಸಲ್ಲಿಸಲು ಅವಕಾಶ ಸಿಕ್ಕಿದ್ದು, ನನ್ನ ಪುಣ್ಯ ಎಂದು ನಿರ್ಗಮಿತ ಧಾರವಾಡ ಜಿಲ್ಲಾಧಿಕಾರಿ ಹಾಗೂ ಪ್ರಸ್ತುತ ಶಿವಮೊಗ್ಗ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅವರು ಕೃತಜ್ಞತೆಯಿಂದ ತಮ್ಮ ಸೇವಾ ದಿನಗಳನ್ನು ಸ್ಮರಿಸಿದರು.

ಅವರು ಇಂದು (ಮಾ.2) ಮಧ್ಯಾಹ್ನ ಧಾರವಾಡ ಜಿಲ್ಲಾಡಳಿತದ ನೇತೃತ್ವದಲ್ಲಿ ವಿವಿಧ ಇಲಾಖೆ ಅಧಿಕಾರಿಗಳು ಆಲೂರು ವೆಂಕಟರಾವ್ ಭವನದಲ್ಲಿ ಆಯೋಜಿಸಿದ್ದ ಜಿಲ್ಲಾಧಿಕಾರಿಗಳಾದ ನಿರ್ಗಮಿತ ಗುರುದತ್ತ ಹೆಗಡೆ ಅವರ ಬಿಳ್ಕೊಡುಗೆ ಹಾಗೂ ಆಗಮಿಸಿರುವ ನೂತನ ಡಿಸಿ ದಿವ್ಯ ಪ್ರಭು ಅವರ ಸ್ವಾಗತ ಸಮಾರಂಭದಲ್ಲಿ ಸನ್ಮಾನ ಸ್ವೀಕರಿಸಿ, ಮಾತನಾಡಿದರು.

ಧಾರವಾಡ ಅಕ್ಷರ, ನೈತಿಕ ಶಿಕ್ಷಣ, ಸಂಸ್ಕೃತಿ ಮತ್ತು ಉತ್ತಮ ಸಂಸ್ಕಾರ ಬೆಳೆಸುತ್ತದೆ. ಪ್ರಾಮಾಣಿಕವಾಗಿ ಬದುಕುವ ಕಲೆ, ಜೀವನಶೈಲಿ ಕಲಿಸುತ್ತದೆ. ಇದು ನಮ್ಮ ಬದುಕು ರೂಪಿಸಿದ ಭೂಮಿ. ಇಲ್ಲಿಂದ ವೈಯಕ್ತಿಕವಾಗಿ ದೂರವಿರಲು ಸಾಧ್ಯವಾಗದು ಎಂದು ಭಾವುಕರಾಗಿ ಅವರು ನುಡಿದರು.

ನನ್ನ ಐಎಎಸ್ ವೃತ್ತಿ ಜೀವನದ ಆರಂಭದಲ್ಲಿ ನಾನು ಹಿರಿಯ ಅಧಿಕಾರಿಗಳಿಂದ ಪಡೆದ ಮಾರ್ಗದರ್ಶನವನ್ನು ಇಂದಿಗೂ ಪಾಲಿಸಿಕೊಂಡು ಬಂದಿದ್ದೇನೆ ಎಂದರು.

ಒಬ್ಬ ಅಧಿಕಾರಿ ಅಥವಾ ಸಿಬ್ಬಂದಿ ತಮ್ಮ ಸೇವೆಯನ್ನು ಸಂತೋಷ, ಆತ್ಮ ತೃಪ್ತಿಯಿಂದ ಮಾಡಬೇಕಾದರೆ ಅವನು ಮೊದಲನೇಯದಾಗಿ, ತನ್ನ ಕುಟುಂಬದವರ ಸಂತೋಷ ಗಮನಿಸಬೇಕು, ಅವರಿಗೂ ಸಮಯ ಮೀಸಲಿಟ್ಟು ಅವರೊಂದಿಗೆ ಕಾಲಕಳೆದು ಅವರ ಬೇಕು, ಬೇಡಿಕೆಗಳಿಗೆ ಸ್ಪಂದಿಸಬೇಕು.

ಎರಡನೇಯದಾಗಿ ಭ್ರಷ್ಟಾಚಾರ ಮಾಡದೆ, ಲಂಚ ಪಡೆಯದೆ, ಪ್ರಾಮಾಣಿಕವಾಗಿ, ಆತ್ಮಸಾಕ್ಷಿಯಿಂದ ಕೆಲಸ ಮಾಡಬೇಕು. ವೇತನದಲ್ಲಿ ಸಂತೃಪ್ತಿ ಜೀವನ ಸಾಗಿಸಬೇಕು. ಮತ್ತು ಮೂರನೇಯದಾಗಿ ಸಮಾಜದ ಪ್ರಮುಖ ಅಂಗಗಳೊಂದಿಗೆ ನಿಯಮಾನುಸಾರವಾದ ಉತ್ತಮ ಸಂಬಂಧಗಳನ್ನು ಹೊಂದಿ, ಅವರ ಸಲಹೆ, ಮಾರ್ಗದರ್ಶನಗಳನ್ನು ಆಲಿಸಿ, ಗೌರವಿಸಬೇಕು. ಮತ್ತು ಅವುಗಳ ಉಪಯುಕ್ತತೆ ಗಮನಿಸಿ ಜಾರಿ ಮಾಡಬೇಕು. ಅಂದಾಗ ನಮ್ಮ ನೌಕರಿ ಸುಸೂತ್ರ, ಸಂತೋಷದಾಯಕವಾಗುತ್ತದೆ ಎಂದು ಡಿಸಿ ಗುರುದತ್ತ ಹೆಗಡೆ ಅವರು ತಿಳಿಸಿದರು.

ಸುಮಾರು ಮೂರು ವರ್ಷಗಳ ಕಾಲ ಧಾರವಾಡ ಜಿಲ್ಲೆಯಲ್ಲಿ ವಿವಿಧ ಹುದ್ದೆಗಳಲ್ಲಿ ಸೇವೆ ಸಲ್ಲಿಸಿದ್ದೇನೆ. ಜಿಲ್ಲಾಧಿಕಾರಿಯಾಗಿ ಧಾರವಾಡದಲ್ಲಿ ಸೇವೆ ಸಲ್ಲಿಸಿದ್ದು ನನ್ನ ವೃತ್ತಿ



ಜೀವನದ ಅಮೂಲ್ಯ ಕ್ಷಣಗಳು ಎಂದು ಸಂತೋಷ ವ್ಯಕ್ತಪಡಿಸಿ, ತಮ್ಮ ಆಡಳಿತ ಅವಧಿಯುದ್ದಕ್ಕೂ ಸಹಕರಿಸಿದ ಜಿಲ್ಲೆಯ ಎಲ್ಲ ಅಧಿಕಾರಿಗಳಿಗೆ, ಜನಪ್ರತಿನಿಧಿಗಳಿಗೆ ಮತ್ತು ಜಿಲ್ಲೆಯ ಜನತೆಗೆ ಕೃತಜ್ಞತೆ ಸಲ್ಲಿಸಿದರು.

ಸಸಿಗೆ ನೀರುಣಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ ಅವರು ಮಾತನಾಡಿ, ಅಧಿಕಾರಿಗಳಿಗೆ ಹೃದಯವಂತಿಕೆ ಇದ್ದಾಗ ಮಾತ್ರ ದೀನ ದುರ್ಬಲರಿಗೆ, ಅಸಹಾಯಕರಿಗೆ ಮತ್ತು ರಕ್ಷಣೆ, ನ್ಯಾಯ ಬಯಸಿ ಬರುವವರಿಗೆ ಸೇವೆ ಸಲ್ಲಿಸಲು ಸಾಧ್ಯವಾಗುತ್ತದೆ. ಹಿಂದಿನ ಜಿಲ್ಲಾಧಿಕಾರಿಯಾಗಿದ್ದ ಗುರುದತ್ತ ಹೆಗಡೆ ಹೃದಯವಂತ, ಚಾಣಾಕ್ಷ ಮತ್ತು ಉತ್ತಮ ಆಡಳಿತಗಾರರಾದ ಅಧಿಕಾರಿಯಾಗಿದ್ದರು. ವರ್ಗಾವಣೆ ಅನಿವಾರ್ಯವಾದರಿಂದ ಬದಲಾವಣೆ ಆಗಿದೆ. ಅವರ ಅವಧಿಯಲ್ಲಿ ಅನೇಕ ಜನಪರ ಕಾರ್ಯಕ್ರಮಗಳನ್ನು, ಫಲಪ್ರದವಾದ ಜನಸಂಪರ್ಕ ಸಭೆಗಳನ್ನು ಜಿಲ್ಲೆಯಲ್ಲಿ ಆಯೋಜಿಸಿ ಯಶಸ್ವಿಗೊಳಿಸಲಾಗಿದೆ. ನೂತನ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಸಮರ್ಥ ಆಡಳಿತಗಾರರಾಗಿದ್ದು, ಸರಕಾರದ ಎಲ್ಲ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಕ್ರಮವಹಿಸಿದ್ದಾರೆ. ಜಿಲ್ಲೆಯನ್ನು ಉತ್ತಮ ರೀತಿಯಲ್ಲಿ ಮುನ್ನಡೆಸುತ್ತಿದ್ದಾರೆ. ಜಿಲ್ಲೆಯ ಅಭಿವೃದ್ಧಿ, ಪ್ರಗತಿಗಾಗಿ ಅಧಿಕಾರಿಗಳಿಗೆ ಸರಕಾರವು ಎಲ್ಲ ನೆರವು, ಸಹಕಾರ, ಮಾರ್ಗದರ್ಶನ ನೀಡುತ್ತಿದೆ ಎಂದು ಅವರು ಹೇಳಿದರು.

ನೂತನ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಸನ್ಮಾನ ಸ್ವೀಕರಿಸಿ ಮಾತನಾಡಿ, ಸೌಮ್ಯಸ್ವಭಾವದ ಗುರುದತ್ತ ಹೆಗಡೆ ಅವರು ಮತ್ತು ನಾನು ಒಂದೇ ಬ್ಯಾಚ್. ಜಿಲ್ಲೆಗೆ ಉತ್ತಮ ಆಡಳಿತ ನೀಡಿದ್ದಾರೆ. ಜಿಲ್ಲೆಯ ಎಲ್ಲ ನೌಕರ ಬಂಧುಗಳು ಅವರಿಗೆ ನೀಡಿದ್ದ ಸಹಕಾರವನ್ನು ನನಗೂ ನೀಡುತ್ತಾರೆ ಎಂಬ ಭರವಸೆ ಇದೆ. ಎಲ್ಲರೂ ಸೇರಿ ಜಿಲ್ಲೆಯ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ದುಡಿಯೋಣ ಎಂದು ತಿಳಿಸಿದರು.

ಮಹಾನಗರ ಪೊಲೀಸ ಆಯುಕ್ತರಾದ ರೇಣುಕಾ ಸುಕುಮಾರ ಹಾಗೂ ಜಿಲ್ಲಾ ಪೊಲೀಸ ಅಧೀಕ್ಷಕ ಡಾ.ಗೋಪಾಲ ಬ್ಯಾಕೂಡ ಅವರು ಮಾತನಾಡಿ, ಡಿಸಿ ಗುರುದತ್ತ ಹೆಗಡೆ ಅವರೊಂದಿಗಿನ ಆಡಳಿತದ ಅನುಭವಗಳನ್ನು ನೆನಪಿಸಿಕೊಂಡರು ಮತ್ತು ಮುಂದಿನ ದಿನಗಳಲ್ಲಿ ಇನ್ನೂ ಉನ್ನತ ಹುದ್ದೆಗೆ ಏರಿ ಜಿಲ್ಲೆಗೆ ಅವರು ಮಾರ್ಗದರ್ಶನ ಮಾಡಲಿದ್ದಾರೆ ಎಂದು ಆಶಿಸಿ, ಶುಭ ಹಾರೈಸಿದರು.

ಕಾರ್ಯಕ್ರಮದಲ್ಲಿ ಹಿರಿಯ ಅಧಿಕಾರಿಗಳಾದ ಕೆಯುಐಡಿಎಫ್‌ಸಿಯ ಮೇಜರ್ ಸಿದ್ದಲಿಂಗಯ್ಯ ಹಿರೇಮಠ, ತಹಶೀಲ್ದಾರ ಯಲ್ಲಪ್ಪ ಗೋಣೆನ್ನನವರ, ಎಚ್‌ಡಿ-ಎಂಸಿ ಕಾರ್ಯಪಾಲಕ ಅಭಿಯಂತರ ಮಲ್ಲಿಕಾರ್ಜುನ, ಶಿರಸ್ತೆದಾರ ಮಲ್ಲಿಕಾರ್ಜುನ ಸೋಲಗಿ, ಗ್ರಾಮ ಆಡಳಿತ ಅಧಿಕಾರಿಗಳ ಸಂಘದ ಅಧ್ಯಕ್ಷ ವೆಂಕಟೇಶ ಹಟ್ಟಿಯವರ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.

ವೇದಿಕೆಯಲ್ಲಿ ಎನ್.ಡಬ್ಲು.ಕೆಎಸ್‌ಆರ್‌ಟಿಸಿ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಭರತ ಎಸ್., ಕೈಮಗ್ಗ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕಿ ಮೂನಾ ರಾವುತ, ಉಪ ಪೊಲೀಸ ಆಯುಕ್ತ ರಾಜೀವ ಪಿ., ಹುಡಾ ಆಯುಕ್ತ ಡಾ.ಸಂತೋಷಕುಮಾರ ಬಿರಾದಾರ, ಉಪವಿಭಾಗಾಧಿಕಾರಿ ಶಾಲಂ ಹುಸೇನ್, ಸರಕಾರಿ ನೌಕರ ಸಂಘದ ಜಿಲ್ಲಾ ಅಧ್ಯಕ್ಷ ಎಸ್.ಎಫ್.ಸಿದ್ದನಗೌಡರ ಇದ್ದರು.

ಧಾರವಾಡ ತಹಸಿಲ್ದಾರ ಡಾ.ಡಿ.ಎಚ್. ಹೂಗಾರ ವಂದಿಸಿದರು. ವಿಜಯಲಕ್ಷ್ಮಿ ಎಚ್. ಕಾರ್ಯಕ್ರಮ ನಿರೂಪಿಸಿದರು.

ಕಾರ್ಯಕ್ರಮದಲ್ಲಿ ಕಂದಾಯ, ಆರೋಗ್ಯ, ಶಾಲಾ ಶಿಕ್ಷಣ, ವಾರ್ತಾ, ಅರಣ್ಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಜಾಗೂ ತಾಲೂಕು ಮಟ್ಟದ ಅಧಿಕಾರಿಗಳು, ಸರಕಾರಿ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಜಿಲ್ಲಾಧಿಕಾರಿಗಳ ಕಚೇರಿ ಸಿಬ್ಬಂದಿಗಳು ಭಾಗವಹಿಸಿದ್ದರು.

## ಜಿಲ್ಲಾಧಿಕಾರಿಗಳ ಕಚೇರಿ ಕಾನೂನು ಕೋಶ ಗುತ್ತಿಗೆ ಆಧಾರದ ಮೇಲೆ ನೆಮಕಾತಿಗಾಗಿ ನಿವೃತ್ತ ಜಿಲ್ಲಾ ನ್ಯಾಯಾಧೀಶ, ನಿವೃತ್ತ ಹಿರಿಯ ಸಿವಿಲ್ ನ್ಯಾಯಾಧೀಶರಿಂದ ಅರ್ಜಿ ಆಹ್ವಾನ

**ಧಾರವಾಡ** : ಧಾರವಾಡ ಜಿಲ್ಲಾ ಕಂದಾಯ ಇಲಾಖೆಯಲ್ಲಿ ಭೂಸ್ವಾಧೀನ ಹಾಗೂ ಇತರೆ ಎಲ್ಲ ತರಹದ ವ್ಯಾಜ್ಯ ಪ್ರಕರಣಗಳಲ್ಲಿ ಜಿಲ್ಲಾಧಿಕಾರಿಗಳಿಗೆ ಕಾನೂನಿನ ಸಲಹೆಗಳನ್ನು ನೀಡಲು ಜಿಲ್ಲಾಧಿಕಾರಿಗಳ ಕಚೇರಿಯ ಕಾನೂನು ಕೋಶಕ್ಕೆ ಒರ್ವ ಕಾನೂನು ಸಲಹೆಗಾರರನ್ನು ಗುತ್ತಿಗೆ ಆಧಾರದಲ್ಲಿ ನೇಮಿಸಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ.

ನಿವೃತ್ತ ಜಿಲ್ಲಾ ನ್ಯಾಯಾಧೀಶರು ಅಥವಾ ನಿವೃತ್ತ ಹಿರಿಯ ಸಿವಿಲ್ ನ್ಯಾಯಾಧೀಶರನ್ನು ಗುತ್ತಿಗೆ ಆಧಾರದಲ್ಲಿ ಮಾಸಿಕ ಸಂಚಿತ ವೇತನವನ್ನು ನೀಡುವ ಷರತ್ತಿಗೊಳಪಡಿಸಿ, ನೇಮಕ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ನಿವೃತ್ತ ಜಿಲ್ಲಾ ನ್ಯಾಯಾಧೀಶರು ಅಥವಾ ನಿವೃತ್ತ ಹಿರಿಯ ಸಿವಿಲ್ ನ್ಯಾಯಾಧೀಶರು ಮಾರ್ಚ್ 7, 2024ರೊಳಗಾಗಿ ಧಾರವಾಡ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಧಾರವಾಡ: ಮರಾಠಾ ಜಾಗೃತಿ ಸಮಾವೇಶ

**ಧಾರವಾಡ** : ಮರಾಠರು ಹಿಂದೂಗಳೇ ವಿನಃ ಹಿಂದುತ್ವವಾದಿಗಳಲ್ಲ. ಆದರೆ, ಇಂದು ಸಮಾಜದಲ್ಲಿ ವ್ಯವಸ್ಥಿತವಾಗಿ ಮರಾಠರು ಮುಸ್ಲಿಂ ವಿರೋಧಿಗಳು ಎಂದು ಬಿಂಬಿಸಲಾಗುತ್ತಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಹೇಳಿದರು.

ಇಲ್ಲಿಯ ಮರಾಠಾ ವಿದ್ಯಾ ಪ್ರಸಾರಕ ಮಂಡಳದಲ್ಲಿ ಸಂತೋಷ ಲಾಡ್ ಫೌಂಡೇಶನ್ ವತಿಯಿಂದ ನಡೆದ ಮರಾಠಾ ಜಾಗೃತಿ ಸಮಾವೇಶ ಮತ್ತು ಸಾಧಕರಿಗೆ ಸನ್ಮಾನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಇಡೀ ದೇಶಕ್ಕೆ ಮೀಸಲಾತಿ ಕೊಟ್ಟ ಸಮಾಜ ನಮ್ಮದಾಗಿದೆ. ಆದರೆ, ಇಂದು ನಾವು ಮೀಸಲಾತಿಗಾಗಿ ಹೋರಾಟ ಮಾಡುತ್ತಿದ್ದೇವೆ. ಅಲ್ಲದೇ ಉಳುವವರಿಗೆ ಭೂಮಿ ನೀಡಿದ ಸಮಾಜ ನಮ್ಮದು. ಆದರೆ, ನಮಗೆ ಇಂದು ಜಾಗೆ ನೀಡುವಂತೆ ಸರಕಾರವನ್ನು ಕೇಳುವ ಪರಿಸ್ಥಿತಿ ಸಮಾಜಕ್ಕೆ ಬಂದೊದಗಿದೆ ಎಂದರು.

ಬಡವರಿಗೆ, ತೊಂದರೆಯಲ್ಲಿ ಇರುವವರಿಗೆ ಸಹಾಯ ಮಾಡುವವರೇ ಛತ್ರಪತಿ. ಆ ಕೆಲಸವನ್ನು ಶಿವಾಜಿ



ಮಹಾರಾಜರು ಮಾಡಿದರು. ಅದಕ್ಕಾಗಿಯೇ ಅವರನ್ನು ಛತ್ರಪತಿ ಎಂದು ಕರೆಯಲಾಗುತ್ತದೆ. ಶಿವಾಜಿ ಮಹಾರಾಜರು ಅಷ್ಟೊಂದು ಬೆಳೆಯಲು ತಾಯಿ ಜೀಜಾಮಾತಾ ಕಾರಣ. ಆದ್ದರಿಂದ ಪ್ರತಿಯೊಂದು ಕಾರ್ಯಕ್ರಮದಲ್ಲಿ ನಾವು ಮಹಿಳೆಯರಿಗೆ ವಿಶೇಷ ಗೌರವ ನೀಡುತ್ತೇವೆ ಎನ್ನುವುದನ್ನು ಸಮಾಜದ ಬಾಂಧವರು ಅರಿತುಕೊಳ್ಳಬೇಕು ಎಂದರು.

ಸಮಾಜದ ಮಕ್ಕಳಿಗೆ ಶಿಕ್ಷಣ ಕೊಡುವ ಕೆಲಸ ಆಗಬೇಕು. ಅಲ್ಲದೇ ನಿರುದ್ಯೋಗಿ ಯುವಕರಿಗೆ ಉದ್ಯೋಗ ಒದಗಿಸಿಕೊಡುವ ಪ್ರಾಮಾಣಿಕ ಪ್ರಯತ್ನವನ್ನು ನಾನು ಮಾಡುತ್ತೇನೆ. ಸಮಾಜ ಒಗ್ಗಟ್ಟಾದಾಗ ಮಾತ್ರ ಅದರ ಅಭಿವೃದ್ಧಿ ಸಾಧ್ಯ. ಈ ನಿಟ್ಟಿನಲ್ಲಿ ನಾವೆಲ್ಲರೂ ಒಗ್ಗಟ್ಟಾಗಿ ಸಮಾಜದ ಅಭಿವೃದ್ಧಿಗೆ ಶ್ರಮಿಸಬೇಕಾಗಿದೆ ಎಂದರು.

ಬೆಂಗಳೂರು ಗೋಸಾವಿ ಮಠದ ಮಂಜುನಾಥ ಭಾರತಿ ಸ್ವಾಮೀಜಿ ಮಾತನಾಡಿ, ಸಮಾಜದಲ್ಲಿ ಸಾಕಷ್ಟು ಸಮಸ್ಯೆಗಳಿವೆ. ಅವುಗಳನ್ನು ಪರಿಹರಿಸಲು ಎಲ್ಲರೂ ಒಂದಾಗಿ ಶ್ರಮಿಸಬೇಕು. ಉತ್ತಮ ಸಮಾಜವನ್ನು ಎಲ್ಲರೂ ಸೇರಿ ಕಟ್ಟೋಣ ಎಂದರು.

ಇದೇ ಸಂದರ್ಭದಲ್ಲಿ ಸುಮಾರು 150ಕ್ಕೂ ಹೆಚ್ಚು ಸಮಾಜದ ಸಾಧಕರಿಗೆ ಸನ್ಮಾನಿಸಲಾಯಿತು. ಮರಾಠಾ ವಿದ್ಯಾಪ್ರಸಾರಕ ಮಂಡಳದ ಅಧ್ಯಕ್ಷ ಮನೋಹರ ಮೋರೆ ಅಧ್ಯಕ್ಷತೆ ವಹಿಸಿದ್ದರು. ಬ್ರಹ್ಮಾನಂದ ಸ್ವಾಮೀಜಿ, ಅನೀಲ ಪಾಟೀಲ, ಡಾ. ಮಯೂರ ಮೋರೆ, ಶಂಕರ ಶೇಳಕೆ, ಸುಭಾಸ ಶಿಂಧೆ, ನಾರಾಯಣ ವೈದ್ಯ, ಗಣೇಶ ಕದಂ, ಸುನೀಲ ದಳವಿ, ಸಂಭಾಜಿ ಘೋಡಸೆ, ಭೀಮಪ್ಪ ಕಸಾಯಿ, ರಾಜು ಬಿರಜನ್ನವರ, ಬಸವಂತ ಮಾಲನವರ, ಬಸವರಾಜ ಜಾಧವ ಸೇರಿದಂತೆ ಇತರರು ಇದ್ದರು.

# 10 ತಿಂಗಳ ತೋಟಗಾರಿಕೆ ತರಬೇತಿಗಾಗಿ ಅರ್ಜಿ ಆಹ್ವಾನ

**ಕೊಪ್ಪಳ :** 2024-25 ನೇ ಸಾಲಿಗೆ ಕೊಪ್ಪಳ ಜಿಲ್ಲೆಯ ಆಸಕ್ತ ಅರ್ಹ ರೈತ ಮಕ್ಕಳಿಗೆ ಕೊಪ್ಪಳ ತಾಲ್ಲೂಕಿನ ಮುನಿರಾಬಾದಿನ ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ 10 ತಿಂಗಳ ತೋಟಗಾರಿಕೆ ತರಬೇತಿಯನ್ನು ನೀಡಲಾಗುತ್ತಿದ್ದು, ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿಯು 2024ರ ಮೇ 02 ರಿಂದ 2025 ರ ಫೆಬ್ರವರಿ 28 ರವರೆಗೆ 10 ತಿಂಗಳುಗಳ ಕಾಲ ನಡೆಯಲಿದೆ. ಅಭ್ಯರ್ಥಿ ಆಯ್ಕೆಗೆ ಸಾಮಾನ್ಯ ಅಭ್ಯರ್ಥಿ-16, ಪರಿಶಿಷ್ಠ ಜಾತಿ-03 ಮತ್ತು ಪರಿಶಿಷ್ಟ ಪಂಗಡ-01 ರಂತೆ ಒಟ್ಟು 20 ಅಭ್ಯರ್ಥಿಗಳ ಗುರಿ ನಿಗದಿಪಡಿಸಲಾಗಿದೆ. ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡ ಮತ್ತು ಅಂಗವಿಕಲರಿಗೆ ಕನಿಷ್ಠ 18 ವರ್ಷ, ಗರಿಷ್ಠ 33 ವರ್ಷ, ಮಾಜಿ ಸೈನಿಕರಿಗೆ 33 ರಿಂದ ಗರಿಷ್ಟ 65 ವರ್ಷ ಹಾಗೂ ಇತರರಿಗೆ ಕನಿಷ್ಠ 18 ವರ್ಷ, ಗರಿಷ್ಠ 30 ವರ್ಷ ವಯೋಮಿತಿಯನ್ನು ನಿಗದಿಪಡಿಸಲಾಗಿದೆ.

ಅಭ್ಯರ್ಥಿಗಳು ಕನ್ನಡ ವಿಷಯಗಳೊಂದಿಗೆ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು, ಅಭ್ಯರ್ಥಿಯು ಚೆನ್ನಾಗಿ ಕನ್ನಡ ಓದುವುದು, ಬರೆಯುವುದು ಮತ್ತು ಮಾತನಾಡುವುದನ್ನು ಬಲ್ಲವರಾಗಿರಬೇಕು. ಈ ತರಬೇತಿಯು ರೈತರ ಮಕ್ಕಳಿಗಾಗಿ ಇರುವುದರಿಂದ ಅಭ್ಯರ್ಥಿಯು ತಂದೆ/ತಾಯಿ ಅಥವಾ ಪೋಷಕರು (ತಂದೆ/ತಾಯಿ ಇಲ್ಲದ ಪಕ್ಷದಲ್ಲಿ) ಕಡ್ಡಾಯವಾಗಿ ಜಮೀನು ಹೊಂದಿರಬೇಕು ಹಾಗೂ ಸ್ವಂತ ಸಾಗುವಳಿ ಮಾಡುತ್ತಿರಬೇಕು.

ಈ ಬಗ್ಗೆ ಪಹಣಿಯನ್ನು ನೀಡುವುದು ಕಡ್ಡಾಯವಾಗಿರುತ್ತದೆ. ಅಭ್ಯರ್ಥಿಗಳು ತೋಟದ ಕೆಲಸಗಳನ್ನು ಮಾಡುವಷ್ಟು ದೃಢಕಾಯರಾಗಿರಬೇಕು.


ಅರ್ಜಿ ಸಲ್ಲಿಸಲು ಸಾಮಾನ್ಯ ಅಭ್ಯರ್ಥಿಗಳಿಗೆ ರೂ.30, ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದವರಿಗೆ ರೂ.15 ಶುಲ್ಕವನ್ನು ಪೋಸ್ಟಲ್ ಆರ್ಡರ್ ಅಥವಾ ಡಿಮ್ಯಾಂಡ್ ಡ್ರಾಫ್ಟ್ ಮೂಲಕ ತೋಟಗಾರಿಕೆ ಉಪನಿರ್ದೇಶಕರು(ಜಿ.ಪಂ) ಕೊಪ್ಪಳ ರವರ ಹೆಸರಿನಲ್ಲಿ ಪಡೆದು ಅರ್ಜಿ ಜೊತೆಗೆ ಲಗತ್ತಿಸಬೇಕು. ಅರ್ಜಿಗಳನ್ನು ಮಾರ್ಚ್ 01 ರಿಂದ 30 ರವರೆಗೆ ತೋಟಗಾರಿಕೆ ಉಪನಿರ್ದೇಶಕರು(ಜಿ.ಪಂ) ಕೊಪ್ಪಳ, ಸಹಾಯಕ ನಿರ್ದೇಶಕರು(ರಾವ) ಕೊಪ್ಪಳ ರವರ ಕಚೇರಿಯಲ್ಲಿ ಪಡೆಯಬಹುದು ಅಥವಾ ಇಲಾಖಾ ವೆಬ್‌ಸೈಟ್ www.horticulture.kar.nic.in ಮುಖಾಂತರ ಡೌನ್‌ಲೋಡ್ ಮಾಡಿಕೊಳ್ಳಬಹುದು.

ಅರ್ಜಿಗಳನ್ನು ಸ್ವೀಕರಿಸಲು ಏಪ್ರಿಲ್ 01 ಕೊನೆಯ ದಿನವಾಗಿದ್ದು, ಅಂದು ಸಂಜೆ 05.30 ರ ಒಳಗಾಗಿ ತೋಟಗಾರಿಕೆ ಉಪನಿರ್ದೇಶಕರು (ಜಿ.ಪಂ.) ಕೊಪ್ಪಳ ಅಥವಾ ಸಹಾಯಕ ತೋಟಗಾರಿಕೆ ನಿರ್ದೇಶಕರು (ರಾವ) ಕೊಪ್ಪಳ ರವರ ಕಛೇರಿಗೆ ಸಲ್ಲಿಸಬೇಕು.

ಏಪ್ರಿಲ್ 06 ರಂದು ಬೆಳಿಗ್ಗೆ 10 ಗಂಟೆಗೆ ತೋಟಗಾರಿಕೆ ಉಪನಿರ್ದೇಶಕರು, ಕೊಪ್ಪಳ ಕಚೇರಿಯಲ್ಲಿ ಸಂದರ್ಶನ ನಡೆಯಲಿದ್ದು, ಎಲ್ಲ ಮೂಲ ದಾಖಲಾತಿಗಳೊಂದಿಗೆ ಅಭ್ಯರ್ಥಿಗಳು ಸಂದರ್ಶನಕ್ಕೆ ಹಾಜರಾಗಬೇಕು. ಪ್ರತ್ಯೇಕ ಸಂದರ್ಶನ ಪತ್ರವನ್ನು ಕಳುಹಿಸಲಾಗುವುದಿಲ್ಲ ಎಂದು ತೋಟಗಾರಿಕೆ ಉಪನಿರ್ದೇಶಕರಾದ ಕೃಷ್ಣ ಉಕ್ಕುಂದ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೋರೆ ಆಸ್ಪತ್ರೆ ಉತ್ತರ ಕರ್ನಾಟಕದಲ್ಲಿಯೇ ಪ್ರಥಮವಾಗಿ ಕಾಕ್ಲೀಯರ ಇಂಪ್ಲ್ಯಾಂಟ ಶಸ್ತ್ರಚಿಕಿತ್ಸೆ ನೀಡುವ ಆಸ್ಪತ್ರೆ

**ಬೆಳಗಾವಿ :** ಕೆಎಲ್‌ಇ ಸಂಸ್ಥೆಯ ಡಾ. ಪ್ರಭಾಕರ ಕೋರೆ ಆಸ್ಪತ್ರೆ ಹಾಗೂ ವೈದ್ಯಕೀಯ ಸಂಶೋಧನಾ ಕೇಂದ್ರವು ಶಾಶ್ವತ ಕಿವುಡತನ ಹೋಗಲಾಡಿಸಲು ಅನೇಕ ಯೋಜನೆಗಳನ್ನು ಜಾರಿಗೆ ತಂದಿದೆ. ಉತ್ತರ ಕರ್ನಾಟಕದಲ್ಲಿಯೇ ಪ್ರಥಮವಾಗಿ ಕಾಕ್ಲೀಯರ ಇಂಪ್ಲ್ಯಾಂಟ ಶಸ್ತ್ರಚಿಕಿತ್ಸೆಯನ್ನು ನೆರವೇರಿಸಿದ ಆಸ್ಪತ್ರೆ. ಸರಕಾರದೊಂದಿಗೆ ಒಡಂಬಡಿಕೆ ಮಾಡಿಕೊಂಡು ಕಾಕ್ಲಿಯರ ಇಂಪ್ಲ್ಯಾಂಟ ಶಸ್ತ್ರಚಿಕಿತ್ಸೆಯನ್ನು ಸಂಪೂರ್ಣ ಉಚಿತವಾಗಿ ನೆರವೇರಿಸಲಾಗುತ್ತಿದೆ. 2022ರಲ್ಲಿ ಉಚಿತ ಶಸ್ತ್ರಚಿಕಿತ್ಸೆಯನ್ನು ಪ್ರಾರಂಭಿಸಲಾಗಿದ್ದು ಇಲ್ಲಿಯವರೆಗೆ 16 ಮಕ್ಕಳಿಗೆ ಕಾಕ್ಲಿಯರ ಇಂಪ್ಲ್ಯಾಂಟ ಶಸ್ತ್ರಚಿಕಿತ್ಸೆಯನ್ನು ನೆರವೇರಿಸಿ ಮಕ್ಕಳಿಗೆ ಹೊಸ ಬದುಕು ನೀಡಲಾಗಿದೆ. ಅದರಂತೆ ವಯಸ್ಕರಿಗೂ ಕೂಡ ಇದನ್ನು ಅಳವಡಿಸಬಹುದು.ಇದು ನಿತ್ಯ ನಿರಂತರವಾಗಿ ಮುಂದುವರೆಯಲಿದೆ. ಶಸ್ತ್ರಚಿಕಿತ್ಸೆಗೆ ಒಳಗಾದ ಮಕ್ಕಳು 6 ತಿಂಗಳಿನಿಂದ 1 ವರ್ಷದವರೆಗೆ ಅವರಿಗೆ ಸ್ಪೀಚ್ ಥೆರಪಿ ನೀಡಿ ಅವರಿಗೆ ಕಿವಿ ಕೇಳಿಸುವದರೊಂದಿಗೆ ಮಾತನಾಡಲು ಕೂಡ ತರಬೇತಿ ನೀಡಲಾಗುತ್ತದೆ.




10 ತಿಂಗಳ ಮಗು ಕೂಡ ಕಾಕ್ಲಿಯರ್ ಇಂಪ್ಲಾಂಟ್ ಶಸ್ತ್ರಚಿಕಿತ್ಸೆಗೆ ಒಳಗಾಗಬಹುದು. ಕರ್ನಾಟಕ ಸರ್ಕಾರದ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ (SAST) ಅಡಿಯಲ್ಲಿ ಕಿವುಡುತನ ನಿಯಂತ್ರಣ ಮತ್ತು ತಡೆಗಟ್ಟುವಿಕೆಗಾಗಿ ರಾಷ್ಟ್ರೀಯ ಕಾರ್ಯಕ್ರಮದ ಜೊತೆಗೆ ಉಚಿತ ಕಾಕ್ಲಿಯರ್ ಇಂಪ್ಲಾಂಟ್ ಯೋಜನೆಯನ್ನು ಪ್ರಾರಂಭಿಸಿದ್ದು, ಯೋಜನೆಯಡಿ 6 ವರ್ಷದೊಳಗಿನ ಮಕ್ಕಳು ಉಚಿತವಾಗಿ ಚಿಕಿತ್ಸೆ ಪಡೆಯಬಹುದು.

ಶ್ರವಣ ದೋಷ ಅಥವಾ ಕಿವುಡುತನವು ಒಂದು ಧ್ವನಿಪೆಟ್ಟಿಗೆಯನ್ನು ದುರ್ಬಲಗೊಳಿಸುವ ಕಾಯಿಲೆಯಾಗಿದ್ದು, ವಿಶ್ವದಾದ್ಯಂತ 466 ಮಿಲಿಯನ್ ಕಿವುಡತನ ಹಾಗೂ ಮೂಕ ಮಕ್ಕಳಿದ್ದರೆ, ಭಾರತದಲ್ಲಿ ಸುಮಾರು 63 ಮಿಲಿಯನ್‌ಗೂ ಅಧಿಕ ಮಕ್ಕಳು ಶಬ್ದ ಆಲಿಸುವ ಮತ್ತು ಮಾತನಾಡುವದರಿಂದ ವಂಚಿತಗೊಂಡಿದ್ದಾರೆ. 18 ವರ್ಷಕ್ಕಿಂತ ಕಡಿಮೆ ವಯಸ್ಸಿನ 5ರಲ್ಲಿ ಒಂದು ಮಗು ಇದರಿಂದ ಬಳಲುತ್ತಿರುವದು ಕಂಡು ಬರುತ್ತಿದೆ. ಹುಟ್ಟಿದ ಮಗು ಎರಡು ವರ್ಷದಲ್ಲಿ ರೋಗ ಪತ್ತೆ ಮಾಡದಿದ್ದರೆ, 5 ವರ್ಷದವರೆಗೆ ಗಮನಕ್ಕೆ ಬರುವುದಿಲ್ಲ. ಭಾರತದಲ್ಲಿ ಪ್ರತಿದಿನ 67,000 ಶಿಶುಗಳು ಜನಿಸುತ್ತವೆ. ಅದರಲ್ಲಿ ಪ್ರತಿ ಸಾವಿರಕ್ಕೆ 4 ಮಕ್ಕಳು ತೀವ್ರವಾದ ಶ್ರವಣ ದೋಷವನ್ನು ಹೊಂದಿರುವದು ಸಮೀಕ್ಷೆಯಿಂದ ತಿಳಿದುಬಂದಿದೆ.

ಜನ್ಮತಃ,(ಜೆನೆಟಿಕ್/ಜೆನೆಟಿಕ್ ಅಲ್ಲದ), ತಾಯಿಯ ಸೋಂಕುಗಳು ಅಥವಾ ಇನ್ನಿತರ ಕಾರಣಗಳಾಗಿರಬಹುದು. ಅದರಲ್ಲಿಯೂ ಮುಖ್ಯವಾಗಿ ರಕ್ತಸಂಬಂಧಿಗಳಲ್ಲಿನ ವಿವಾಹವಾಗುವ ದಂಪತಿಗಳ ಮಗು ಶ್ರವಣದೋಷದಿಂದ ಬಳಲುತ್ತಿರುವದು ಸಾಮಾನ್ಯವಾಗಿ ಕಂಡುಬರುತ್ತದೆ.

ಮಗುವಿಗೆ ಉತ್ತಮ ಮಾತು ಮತ್ತು ಭಾಷೆಯನ್ನು ಅಭಿವೃದ್ಧಿಪಡಿಸಲು, ಶ್ರವಣೇಂದ್ರಿಯ ಪ್ರಚೋದನೆಯೊಂದಿಗೆ ಕೇಳುವ ಗ್ರಹಿಕೆ ಬಹಳ ಮುಖ್ಯ. ಮೆದುಳಿನ ಬೆಳವಣಿಗೆಯು ಹೆಚ್ಚಾದ ಮೊದಲ ಎರಡು ವರ್ಷಗಳಲ್ಲಿ ಶ್ರವಣೇಂದ್ರಿಯ ಸಂಪರ್ಕಗಳು ರೂಪುಗೊಳ್ಳುತ್ತವೆ. ನಂತರ ಕಡಿಮೆಯಾಗುತ್ತ ಅಂತಿಮವಾಗಿ ಆರು ವರ್ಷಗಳ ನಂತರ ಬಹಳ ಕಡಿಮೆ ಆಗುತ್ತದೆ. ಈ ಅವಧಿಯಲ್ಲಿ ಶ್ರವಣೇಂದ್ರಿಯ ಅಥವಾ ಧ್ವನಿ ಪ್ರಚೋದಕಗಳ ಕೊರತೆಯು ಶ್ರವಣೇಂದ್ರಿಯ ಹಾದಿಗಳಲ್ಲಿ ಕೊರತೆಯನ್ನು ಉಂಟುಮಾಡುತ್ತದೆ. ಆಗ ಮಗುವಿನ ಶ್ರವಣ ದೋಷವು ಕಂಡುಬರುತ್ತದೆ. ಇದರಿಂದ ಮಾತು ಮತ್ತು ಭಾಷೆಯ ಬೆಳವಣಿಗೆಯಲ್ಲಿ ನ್ಯೂನ್ಯತೆ ಕಂಡುಬರುತ್ತದೆ. ಆಳವಾದ ಶ್ರವಣದೋಷ ಹೊಂದಿರುವ ಮಕ್ಕಳಿಗೆ ಶ್ರವಣ ಸಾಧನಗಳನ್ನು ಅಳವಡಿಸಿದರೂ ಕೂಡ ಮಾತನ್ನು ಗ್ರಹಿಸದೇ, ಮಾತನಾಡದೇ ಇದ್ದಾಗ ಅದರ ಬಳಕೆ ಪ್ರಯೋಜನಕ್ಕೆ ಬರುವುದಿಲ್ಲ. ಆಗ ಕಾಕ್ಲಿಯರ್ ಇಂಪ್ಲಾಂಟ್ ಶಸ್ತ್ರಚಿಕಿತ್ಸೆ ಮಾತ್ರ ಶಾಶ್ವತ ಪರಿಹಾರವನ್ನು ಕಲ್ಪಿಸುತ್ತದೆ.

ಕಾಕ್ಲಿಯರ್ ಇಂಪ್ಲಾಂಟ್ ಒಂದು ಶ್ರವಣೇಂದ್ರಿಯ ಸಾಧನವಾಗಿದ್ದು, ಸಾಧನದ ಹೊರಭಾಗವನ್ನು ಕಿವಿಯ ಹಿಂದೆ ತಲೆಬುರುಡೆಯ ಮೂಳೆಯ ಮೇಲೆ ಬಾಹ್ಯವಾಗಿ ಇರಿಸಲಾಗುತ್ತದೆ ಮತ್ತು ಶ್ರವಣೇಂದ್ರಿಯ ನರಗಳ ಜೀವ ಪ್ರಚೋದನೆಗಾಗಿ ಒಳಗಿನ ಕಿವಿಯೊಳಗೆ (ಕೋಕ್ಲಿಯಾ) ಎಲೆಕ್ಟ್ರೋಡ್ ರಚನೆಯೊಂದಿಗೆ ಒಳಭಾಗವನ್ನು ಶಸ್ತ್ರಚಿಕಿತ್ಸೆಯಿಂದ ಸೇರಿಸಲಾಗುತ್ತದೆ. ಮಗುವಿನ ಮೆದುಳಿನ ಬೆಳವಣಿಗೆಯು 5 ರಿಂದ 7 ವರ್ಷಗಳವರೆಗೆ ಗರಿಷ್ಠವಾಗಿರುವ ಕಾರಣ ಚಿಕ್ಕ ವಯಸ್ಸಿನಲ್ಲಿಯೇ ಶಸ್ತ್ರಚಿಕಿತ್ಸೆ ನಡೆಸಿದರೆ ಉತ್ತಮ ಫಲಿತಾಂಶಗಳನ್ನು ನೀಡುತ್ತದೆ. ಮಕ್ಕಳ ಕಿವುಡುತನ ಪ್ರಾರಂಭವಾದ ನಂತರ ಪತ್ತೆಹಚ್ಚಿದರೆ

ಮತ್ತು ನಂತರ ತ್ವರಿತವಾಗಿ ಅಳವಡಿಸುವಿಕೆಯನ್ನು ನಿರ್ವಹಿಸಿದರೆ ಮಕ್ಕಳು ಸಾಮಾನ್ಯ ಮಾತು ಮತ್ತು ಭಾಷೆಯ ಬೆಳವಣಿಗೆಯಲ್ಲಿ ಪ್ರಗತಿ ಕಾಣಬಹುದು.

## ವಿಶ್ವ ಶ್ರವಣ ದಿನಾಚರಣೆ-2024

# ಶ್ರವಣ ಸಮಸ್ಯೆ ಇರುವ ಮಕ್ಕಳು ಚಿಕಿತ್ಸೆ ಪಡೆದು ಆರೋಗ್ಯಕರ ಜೀವನ ನಡೆಸಬಹುದು; ಈರಣ್ಣ ಕಡಾಡಿ

**ಬೆಳಗಾವಿ :** ಮನುಷ್ಯನ ದೇಹದಲ್ಲಿ ಇರುವ ಪ್ರತಿಯೊಂದು ಅಂಗವು ಅಮೂಲ್ಯವಾದದ್ದು, ಕೆಲವು ಜನರಿಗೆ ಹುಟ್ಟಿನಿಂದಲೇ ಶ್ರವಣ ಸಮಸ್ಯೆ ಹೊಂದಿದ್ದು ಈ ಬಗ್ಗೆ ಇರುವ ತಪ್ಪು ತಿಳಿವಳಿಕೆಗಳಿಂದ ಹೊರ ಬಂದು ಸರಿಯಾದ ಚಿಕಿತ್ಸೆ ಪಡೆದುಕೊಂಡಲ್ಲಿ ಶ್ರವಣ ಸಮಸ್ಯೆಯನ್ನು ಹೋಗಲಾಡಿಸಬಹುದು ಎಂದು ರಾಜ್ಯ ಸಭಾ ಸದಸ್ಯರಾದ ಈರಣ್ಣ ಕಡಾಡಿ ನುಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ಬೆಳಗಾವಿ ಜಿಲ್ಲಾ ಆಸ್ಪತ್ರೆ, ಅಡಿಟೋರಿಯಂ ಸಭಾ ಭವನದಲ್ಲಿ ರಾಷ್ಟ್ರೀಯ ಶ್ರವಣ ದೋಷ ನಿಯಂತ್ರಣ ಮತ್ತು ನಿವಾರಣಾ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಸಾರ್ವಜನಿಕರ ಉತ್ತಮ ಆರೋಗ್ಯಕ್ಕಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಆರೋಗ್ಯ ಇಲಾಖೆಗೆ ಸಾಕಷ್ಟು ಅನುದಾನ ನೀಡುವದರ ಜೊತೆಗೆ ಅನೇಕ ಆರೋಗ್ಯ ಯೋಜನೆಗಳನ್ನು ಜಾರಿಗೊಳಿಸಿವೆ. ಈ ಯೋಜನೆಗಳ ಮುಖಾಂತರ ಸಾರ್ವಜನಿಕರು ತಮ್ಮ ಆರೋಗ್ಯದ ಸಮಸ್ಯೆಗಳಿಗೆ ಸೂಕ್ತ ಸಮಯದಲ್ಲಿ ಚಿಕಿತ್ಸೆ ಪಡೆದುಕೊಳ್ಳಬೇಕು.




ಸರ್ಕಾರಗಳು ಜಾರಿಗೊಳಿಸಿರುವ ಆರೋಗ್ಯ ಯೋಜನೆಯಗಳಡಿ ಶ್ರವಣ ಸಮಸ್ಯೆ ಇರುವ ಮಕ್ಕಳಿಗೆ ಚಿಕಿತ್ಸೆ ಒದಗಿಸಿ ಆರೋಗ್ಯಕರ ಜೀವನ ನಡೆಸುವಂತೆ ತಿಳಿಸಿದರು.

ಇದೇ ಸಂದರ್ಭದಲ್ಲಿ ಶ್ರವಣ ದೋಷ ಸಮಸ್ಯೆ ಹೊಂದಿರುವ ಮಕ್ಕಳಿಗೆ ಶ್ರವಣ ಆರೈಕೆ ಸೇವೆಗಳ ಕಿಟ್ ವಿತರಿಸಿ, ಜಿಲ್ಲೆಯಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸಿದ ಸರ್ಕಾರಿ ಆಸ್ಪತ್ರೆಗಳಿಗೆ ಜಿಲ್ಲಾ ಮಟ್ಟದ ಕಾಯಕಲ್ಪ ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಹಾಗೂ ಕುಟುಂಬ ಮತ್ತು ಕಲ್ಯಾಣಾಧಿಕಾರಿ ಡಾ.ಮಹೇಶ ಕೋಣಿ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ. ವಿ.ವಿ.ಶಿಂಧೆ, ಬೆಳಗಾವಿ ಬಿಮ್ಸ್ ಆಸ್ಪತ್ರೆ ನಿರ್ದೇಶಕರ ಡಾ.ಅಶೋಕ ಕುಮಾರ ಶೆಟ್ಟಿ, ಬಿಮ್ಸ್ ಸ್ಥಳಿಯ ವೈದ್ಯಾಧಿಕಾರಿ ಸರೋಜಿ ಲೆಗಡಿ, ಜಿಲ್ಲಾ ಓಗಿಃಆಅಕ0 ಡಾ. ವಿವೇಕ ಹೊನ್ನಾಳಿ, ಜಿಲ್ಲಾ ಕುಷ್ಠ ರೋಗ ಅಧಿಕಾರಿ ಗೀತಾ ಕಾಂಬಳೆ, ಜಿಲ್ಲಾ ಕ್ಷಯ ರೋಗ ಅಧಿಕಾರಿ ಚಾಂದಣಿ ದೇವಡಿ ಸೇರಿದಂತೆ ಆರೋಗ್ಯ ಇಲಾಖೆ ಅಧಿಕಾರಿ, ಸಿಬ್ಬಂದಿಗಳು ಉಪಸ್ಥಿತರಿದ್ದರು. ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ ಡಾ. ವಿ.ಎಮ್.ಭೋಮಿ ಸ್ವಾಗತಿಸಿದರು.

ಅಪರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್.ಗಡೇದ ವಂದಿಸಿದರು. ಪ್ರಭಾರಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾಜಿ ಮಾಲಗೆನ್ನವರ ಕಾರ್ಯಕ್ರಮ ನಿರೂಪಸಿದರು.

# ಡಾ. ಪ್ರಭಾಕರ ಕೋರೆ ಆಸ್ಪತ್ರೆಯಲ್ಲಿ ವಿಶ್ವ ಶ್ರವಣ ದಿನ ಆಚರಣೆ

**ಬೆಳಗಾವಿ :** ಗ್ರಾಮೀಣ ಪ್ರದೇಶದ ಜನರು ಅನೇಕ ಖಾಯಿಲೆಗಳಿಗೆ ಈಗಲೂ ಕೂಡ ಮೂಡನಂಬಿಕೆಗೆ ಒಳಗಾಗಿ ಸರಿಯಾದ ಸಮಯಕ್ಕೆ ಚಿಕಿತ್ಸೆಯಿಂದ ವಂಚಿತರಾಗುತ್ತಿರುವದು ಅತ್ಯಂತ ಕಳವಳಕಾರಿ. ಕಿವಿ ಕೇಳದರಿರುವದು ಹಾಗೂ ಮಾತು ಬಾರದಿರುವದು ಜನ್ಮತಃವಾಗಿರುವ ಆರೋಗ್ಯ ತೊಂದರೆ. ಅದಕ್ಕೆ ಸರಿಯಾದ ಸಮಯದಲ್ಲಿ ಚಿಕಿತ್ಸೆ ಪಡೆದರೆ ಗುಣಮುಖರಾಗುತ್ತಾರೆ. ಆದ್ದರಿಂದ ಕಿವುಡ ಮಕ್ಕಳಿಗೆ ತಪಾಸಣೆ ಮತ್ತು ಸರಿಯಾದ ಸಮಯಕ್ಕೆ ಶಸ್ತ್ರಚಿಕಿತ್ಸೆಯನ್ನು ಮಾಡಿಸಬೇಕೆಂದು ಕೆಎಲ್‌ಇ ಸಂಸ್ಥೆಯ ಕಾರ್ಯಾಧ್ಯಕ್ಷರು ಹಾಗೂ ಕಾಹೆರ ಕುಲಪತಿ ಡಾ. ಪ್ರಭಾಕರ ಕೋರೆ ಅವರಿಂದಿಲ್ಲಿ ಸಲಹೆ ನೀಡಿದರು.

ವಿಶ್ವ ಶ್ರವಣ ದಿನ (World Hearing Day) ಆಚರಣೆ ಅಂಗವಾಗಿ ಕಾಹೆರ, ಜೆಎನ ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಕೆಎಲ್‌ಇ ಸಂಸ್ಥೆಯ ಡಾ. ಪ್ರಭಾಕರ ಕೋರೆ ಆಸ್ಪತ್ರೆಯ ಕಿವಿ, ಗಂಟಲು ಹಾಗೂ ಮೂಗು ವಿಭಾಗವು ಇದೇ ದಿ. 4 ಮಾರ್ಚ 2024ರಂದು ಏರ್ಪಡಿಸಿದ್ದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಕಿವುಡ ಹಾಗೂ ಮೂಕರಾದರೆ ಮೂಡನಂಬಿಕೆಗೆ ಜೋತು ಬೀಳದೇ



ವೈದ್ಯಕೀಯ ತಪಾಸಣೆ ಮಾಡಿಸಿಕೊಳ್ಳಿ. ಅಜ್ಞಾನ ತೊಲಗಿಸಿ. ಅನಾರೋಗ್ಯ ಪೀಡಿತ ಮಕ್ಕಳಿಗೆ ಸರಿಯಾದ ಚಿಕಿತ್ಸೆ ನೀಡಿ ಸ್ವಂತ ಕಾಲ ಮೇಲೆ ನಿಲ್ಲುವ ಸಾಮರ್ಥ್ಯವನ್ನು ಕೆಎಲ್‌ಇ ಸಂಸ್ಥೆಯ ಡಾ. ಪ್ರಭಾಕರ ಕೋರೆ ಆಸ್ಪತ್ರೆಯು ಕಲ್ಪಿಸುತ್ತಿದೆ ಎಂದರು.

ಕಿವುಡ ಮಕ್ಕಳ ಆರೋಗ್ಯವನ್ನು ಸುಧಾರಿಸಲು ಅವಶ್ಯವಿರುವ ಕಾಕ್ಲಿಯರ ಇಂಪ್ಲ್ಯಾಂಟ ಶಸ್ತ್ರಚಿಕಿತ್ಸೆ ನೆರವೇರಿಸುವದಕ್ಕಾಗಿ ಕಳೆದ 2 ವರ್ಷಗಳವರೆಗೆ ಹೋರಾಟ ಮಾಡಿ ಸರಕಾರದಿಂದ ಸಹಾಯಧನ ಪಡೆದು ಆರ್ಥಿಕವಾಗಿ ಹಿಂದುಳಿದಿರುವ ಮಕ್ಕಳಿಗೆ ಶಸ್ತ್ರಚಿಕಿತ್ಸೆ ನಡೆಸಲಾಗುತ್ತಿದೆ. ನಂತರ ಒಂದು ವರ್ಷ ತರಬೇತಿ ನೀಡಿ ಅವರಿಗೆ ಮಾತು ಆಲಿಸುವ ಮತ್ತು ಮಾತನಾಡುವದರ ಕುರಿತು ತರಬೇತಿ ನೀಡಲಾಗುತ್ತಿದೆ. ಈಗಾಗಲೇ 16 ಮಕ್ಕಳಿಗೆ ಕಾಕ್ಲಿಯರ ಇಂಪ್ಲ್ಯಾಂಟ ಶಸ್ತ್ರಚಿಕಿತ್ಸೆ ನಡೆಸಿ ಜೀವನದಾನ ನೀಡಿರುವದು ಅತ್ಯಂತ ಖುಷಿ ತಂದಿದೆ. ಮಹಾನಗರಗಳಲ್ಲಿ ಲಭಿಸುವ ಎಲ್ಲ ಸೌಲಭ್ಯಗಳನ್ನು ನಮ್ಮ ಆಸ್ಪತ್ರೆಯಲ್ಲಿ ಅಳವಡಿಸಿಕೊಳ್ಳಲಾಗುತ್ತಿದೆ. ಆದ್ದರಿಂದ ಜನರು ಸರಿಯಾದ ಸಮಯಕ್ಕೆ ಚಿಕಿತ್ಸೆ ಪಡೆದು ಗುಣಮುಖರಾಗುವಂತೆ ಸಲಹೆ ನೀಡಿದರು.

ಕೆಎಲ್‌ಇ ಸಂಸ್ಥೆಯ ಡಾ. ಪ್ರಭಾಕರ ಕೋರೆ ಆಸ್ಪತ್ರೆಯ ವೈದ್ಯಕೀಯ ನಿರ್ದೇಶಕರಾದ ಡಾ. (ಕರ್ನಲ್) ಎಂ ದಯಾನಂದ ಅವರು ಮಾತನಾಡಿ, ಒಂದೇ ಸೂರಿನಡಿ ಅನೇಕ ರೀತಿಯ ಖಾಯಿಲೆಗಳಿಗೆ ಆರ್ಥಿಕವಾಗಿ ಹಿಂದುಳಿದಿರುವ ರೋಗಿಗಳಿಗೆ ಸರಕಾರದ ಸಹಾಯದೊಂದಿಗೆ ಉಚಿತ ಚಿಕಿತ್ಸೆ ನೀಡಲಾಗುತ್ತಿದೆ. ಆದ್ದರಿಂದ ಹಿಂಜರಿಯದೇ ಸರಿಯಾದ ಸಮಯದಲ್ಲಿ ಚಿಕಿತ್ಸೆ ಪಡೆಯಬೇಕೆಂದು ಸಲಹೆ ನೀಡಿದ ಅವರು, ವಿಶ್ವ ಶ್ರವಣ ದಿನಾಚರಣೆ ಅಂಗವಾಗಿ ದಿ. 4 ರಿಂದ 9ರವರೆಗೆ ಉಚಿತ ತಪಾಸಣೆ ಇದೆ. ಅದರ ಸದುಪಯೋಗವನ್ನು ಪಡೆದುಕೊಳ್ಳುವಂತೆ ಕೋರಿದರು.

ಆಸ್ಪತ್ರೆಯ ಇಎನ್‌ಟಿ ವಿಭಾಗದ ಮುಖ್ಯಸ್ಥರಾದ ಡಾ. ರಾಜೇಂದ್ರ ಮೆಟಗುಡಮಠ ಅವರು ಪ್ರಾಸ್ತವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಜೆಎನ್‌ಎಂಸಿ ಉಪಪ್ರಾಚಾರ್ಯ ಡಾ. ವಿ ಎಂ ಪಟ್ಟಣಶೆಟ್ಟಿ, ಡಾ. ಆರಿಫ್ ಮಾಲ್ದಾರ, ಡಾ. ಬಿ ಪಿ ಬೆಳಲದವರ, ಡಾ. ವಿನಿತಾ ಮೆಟಗುಡಮಠ, ಡಾ. ಪ್ರೀತಿ ಹಜಾರೆ, ಡಾ. ಪ್ರಶಾಂತ ಪಾಟೀಲ, ಡಾ. ಪ್ರೀತಿ ಶೆಟ್ಟಿ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು. ಡಾ. ಶಮಾ ಬೆಲ್ಲದ ನಿರೂಪಿಸಿದರು. ಡಾ. ನಿತಿನ ಅಂಕಲೆ ವಂದನಾರ್ಪಣೆ.

# ಎತ್ತಿನ ಬಂಡಿ ಏರಿದ ಸ್ಪರ್ಧೆಗೆ ಚಾಲನೆ ನೀಡಿದ ಜಿಲ್ಲಾ ಉಸ್ತುವಾರಿ ಸಚಿವರು ಕನಕಗಿರಿ ಉತ್ಸವದ ಮೆರುಗು ಹೆಚ್ಚಿಸಿದ ಎತ್ತಿನ ಬಂಡಿ ಸಿಂಗಾರ ಸ್ಪರ್ಧೆ

**ಕೊಪ್ಪಳ :** ಕನಕಗಿರಿ ಉತ್ಸವ-2024ರ ಅಂಗವಾಗಿ ಎ.ಪಿ.ಎಮ್.ಸಿ ಆವರಣದಲ್ಲಿ ಮಾ.03ರಂದು ಆಯೋಜಿಸಲಾಗಿದ್ದ, ಎತ್ತಿನ ಬಂಡಿ ಸಿಂಗಾರ ಸ್ಪರ್ಧೆಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ಎಸ್ ತಂಗಡಗಿ ಅವರು ಚಾಲನೆ ನೀಡಿದರು.



ಉತ್ಸವದ ಅಂಗವಾಗಿ ಇದೇ ಮೊದಲ ಬಾರಿಗೆ ರೈತರ ಸಂಗಾತಿ, ಉಳುಮೆಗೆ ಸಹಕಾರಿಯಾಗಿರುವ ವಿವಿಧ ದೇಶಿ ತಳಿಯ ಎತ್ತಿನಬಂಡಿ ಸಿಂಗಾರ ಸ್ಪರ್ಧೆಯು ಬಹಳ ಆಕರ್ಷಕವಾಗಿ ಪ್ರದರ್ಶನವಾಯಿತು. ಸ್ಪರ್ಧೆಯಲ್ಲಿ ಎತ್ತಿನಬಂಡಿಗಳ ಸಿಂಗಾರ ಪ್ರದರ್ಶನ ಜನಮನ ಸೂರೆಗೊಂಡಿತ್ತು.


ಸ್ಪರ್ಧೆಯಲ್ಲಿ ವಿವಿಧ ರೀತಿಯ ದೇಶಿ ತಳಿಯ ಎತ್ತಿನಬಂಡಿಗಳು ಪಾಲ್ಗೊಂಡಿದ್ದವು. ರೈತರು ತಮ್ಮ ಎತ್ತಿನಬಂಡಿಗಳಿಗೆ ಬಾಳೆಗೊನೆ, ಬಲೂನ್, ಗೆಜ್ಜೆ, ಮಗೋಡ, ಹಾಗೂ ಪುಷ್ಪಾಲಂಕಾರ ಮಾಡುವುದರ ಮೂಲಕ ಸಾರ್ವಜನಿಕರನ್ನು ತಮ್ಮತ್ತ ಗಮನಸೆಳೆದರು. ಮದುವನಗಿತ್ತಿಯ ಹಾಗೇ ಸಿಂಗಾರಗೊಂಡ ಎತ್ತು ಮತ್ತು ಬಂಡಿ ನೋಡುಗರ ಕಣ್ಣನ್ನು ಕಂಗೋಳಿಸುತ್ತಿದ್ದವು. ಜಿಲ್ಲಾ ಉಸ್ತುವಾರಿ ಸಚಿವರು ಅಲಂಕಾರಗೊಂಡ ಎತ್ತಿನಬಂಡಿ ಏರಿ, ಎತ್ತಿನಬಂಡಿ ಓಡಿಸಿದ್ದು, ಬಹಳ ವಿಶೇಷವಾಗಿತ್ತು.

ಈ ಸಂದರ್ಭದಲ್ಲಿ ಉತ್ಸವ ಕ್ರೀಡಾ ಸಮಿತಿಯ ಅಧ್ಯಕ್ಷರಾದ ವಿಠ್ಠಲ್ ಜಾಬಗೌಡರ, ಕನಕಗಿರಿ ತಹಶೀಲ್ದಾರರಾದ ವಿಸ್ವನಾಥ ಮುರುಡಿ ಸೇರಿದಂತೆ ಜನಪ್ರತಿನಿಧಿಗಳು, ಅಧಿಕಾರಿಗಳು ಹಲವು ಗಣ್ಯರು, ರೈತರು, ಸಾರ್ವಜನಿಕರು ಉಪಸ್ಥಿತರಿದ್ದರು.

# ಕನಕಗಿರಿ ಉತ್ಸವ ಮಾಧ್ಯಮ ಕೇಂದ್ರಕ್ಕೆ ಜಿಲ್ಲಾಧಿಕಾರಿಗಳು, ಜಿಪಂ ಸಿಇಓ, ಎಸ್ಪಿ ಭೇಟಿ

**ಕೊಪ್ಪಳ :** ಕನಕಗಿರಿ ಉತ್ಸವ-24ರ ಹಿನ್ನೆಲೆಯಲ್ಲಿ ಮುಖ್ಯ ವೇದಿಕೆಯ ಬಳಿ ನಿರ್ಮಿಸಲಾಗಿದ್ದ ಮಾಧ್ಯಮ ಕೇಂದ್ರಕ್ಕೆ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಮಾರ್ಚ್ 3ರಂದು ಭೇಟಿ ನೀಡಿದರು.

ಮಾಧ್ಯಮ ಕೇಂದ್ರದಲ್ಲಿ ಕಾರ್ಯ ನಿರತರಾಗಿದ್ದ ಪತ್ರಕರ್ತರನ್ನು ಮಾತನಾಡಿಸಿದ ಜಿಲ್ಲಾಧಿಕಾರಿಗಳಾದ ನಲಿನ್ ಅತುಲ್ ಅವರು, ಪತ್ರಕರ್ತರ ಕಾರ್ಯವೈಖರಿ, ಶ್ರಮದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಕನಕಗಿರಿ ಉತ್ಸವಕ್ಕೆ ಅತ್ಯುತ್ತಮವಾಗಿ ಪ್ರಚಾರ ನೀಡಿದ ಎಲ್ಲ ಪತ್ರಕರ್ತರ ಸಹಕಾರ ಮತ್ತು ಶ್ರಮಕ್ಕೆ ತಾವು ಅಭಿನಂದನೆ



ಸಲ್ಲಿಸುವುದಾಗಿ ಇದೆ ವೇಳೆ ಜಿಲ್ಲಾಧಿಕಾರಿಗಳು ತಿಳಿಸಿದರು.

ಇದೆ ವೇಳೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ರತ್ನಂ ಪಾಂಡೆಯ

ಅವರು ಸಹ ಮಾಧ್ಯಮ ಕೇಂದ್ರಕ್ಕೆ ಭೇಟಿ ನೀಡಿ ಪರ್ತಕರ್ತರೊಂದಿಗೆ ಆತ್ಮೀಯವಾಗಿ ಮಾತನಾಡಿ ಪತ್ರಕರ್ತರ ಸಹಕಾರಕ್ಕೆ ಧನ್ಯವಾದಗಳನ್ನು ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಯಶೋಧಾ ವಂಟಗೊಡಿ ಅವರು ಮಾಧ್ಯಮ ಕೇಂದ್ರಕ್ಕೆ ಭೇಟಿ ನೀಡಿ, ಮಾಧ್ಯಮ ಕೇಂದ್ರವನ್ನು ಸುಸಜ್ಜಿತವಾಗಿ ನಿರ್ಮಿಸಲಾಗಿದೆ. ಉತ್ಸವಕ್ಕೆ ಮಾಧ್ಯಮ ಪ್ರತಿನಿಧಿಗಳಿಂದ ಉತ್ತಮವಾಗಿ ಪ್ರಚಾರವಾಗಿದೆ ಎಂದು ತಿಳಿಸಿದರು.

ಜಿಲ್ಲಾ ವಾರ್ತಾಧಿಕಾರಿ ಗವಿಸಿದ್ದಪ್ಪ ಅವರು, ಮಾಧ್ಯಮ ಕೇಂದ್ರದಲ್ಲಿದ್ದ ವಿವಿಧ ಪತ್ರಿಕೆಗಳ ಮತ್ತು ಸುದ್ದಿವಾಹಿನಿಗಳ ಪರಿಚಯ ಮಾಡಿಕೊಟ್ಟರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿಗ'ಳಾದ' ಸಾವಿತ್ರಿ ಬಿ ಕಡಿ, ಕೊಪ್ಪಳ ಉಪವಿಭಾಗಾಧಿಕಾರಿಗಳಾದ ಕ್ಯಾಪ್ಟನ್ ಮಹೇಶ ಮಾಲಗಿತ್ತಿ ಸೇರಿದಂತೆ ಇತರ ಅಧಿಕಾರಿಗಳು ಉಪಸ್ಥಿತರಿದ್ದರು.

ಭಾವಚಿತ್ರ ಪಡೆದರು: ಮಾರ್ಚ್ 2ರಿಂದ ಮಾರ್ಚ್ 3ರವರೆಗೆ ಎರಡು ದಿನಗಳ ಕಾಲ ಮಾಧ್ಯಮ ಕೇಂದ್ರದಲ್ಲಿ ಉತ್ಸಾಹದಿಂದ ಕೆಲಸ ಮಾಡಿದ ಪತ್ರಕರ್ತರು ಇದೆ ವೇಳೆ ಜಿಲ್ಲಾಧಿಕಾರಿಗಳೊಂದಿಗೆ ಗ್ರೂಪ್ ಫೋಟೊ ತೆಗೆಯಿಸಿಕೊಂಡರು.

ಈ ಸಂದರ್ಭದಲ್ಲಿ ವಿವಿಧ ಪತ್ರಿಕೆಗಳ ಮತ್ತು ವಿದ್ಯುನ್ಮಾನ ವಾಹಿನಿಯ ಪ್ರತಿನಿಧಿಗಳು ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಿಬ್ಬಂದಿ ಇದ್ದರು.

# ಕೊಪ್ಪಳ ಜಿಲ್ಲೆಯಲ್ಲಿ ಪಲ್ಸ್ ಪೊಲಿಯೋ ಲಸಿಕಾ ಅಭಿಯಾನ



**ಕೊಪ್ಪಳ :** ರಾಜ್ಯಾದ್ಯಂತ ಮಾ.3ರಂದು ಏಕಕಾಲಕ್ಕೆ ಆರಂಭಗೊಂಡಂತೆ ಪಲ್ಸ್ ಪೊಲಿಯೋ ಅಭಿಯಾನವು ಕೊಪ್ಪಳ ಜಿಲ್ಲೆಯಲ್ಲಿ ಸಹ ಫೆ.3ರಂದು ಆರಂಭಗೊಂಡಿತು.

ಸಂಸದರಾದ ಕರಡಿ ಸಂಗಣ್ಣ ಅವರು ಮಕ್ಕಳಿಗೆ ಪೊಲಿಯೋ ಲಸಿಕೆ ಹಾಕುವ ಮೂಲಕ ಬಸ್ ನಿಲ್ದಾಣದಲ್ಲಿ ಪೊಲಿಯೊ ಲಸಿಕಾ ಅಭಿಯಾನಕ್ಕೆ ವಿದ್ಯುಕ್ತ ಚಾಲನೆ ನೀಡಿದರು.

ಪ್ರಾಥಮಿಕ ಆರೋಗ್ಯ ಕೇಂದ್ರ ಚಳಗೇರಾ ವ್ಯಾಪ್ತಿಯ ಕೊರಡಕೇರಾ ಗ್ರಾಮದಲ್ಲಿ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮಕ್ಕೆ ವಿಧಾನಸಭೆಯ ವಿರೋಧ ಪಕ್ಷದ ಮುಖ್ಯ ಸಚೇತಕರು ಹಾಗೂ ಶಾಸಕರಾದ ದೊಡ್ಡನಗೌಡ ಪಾಟೀಲ ಅವರು ಮಗುವಿಗೆ ಪೊಲಿಯೊ ಲಸಿಕೆ ಹಾಕುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತ್ ಅಧ್ಯಕ್ಷೆ ಸುಜಾತ ಕೊಳ್ಳಿ, ಸದಸ್ಯರಾದ ಮರದಪ್ಪ, ಗಿರಿಜವ್ವ ಹಿರೇಮನಿ ಶಾರದಾ ಇಲಾಳ ಹಾಗೂ ಇನ್ನಿತರರು ಇದ್ದರು.

ಚಿಕ್ಕಸಿಂಧೋಗಿ ಗ್ರಾಮದಲ್ಲಿ ಜಿಲ್ಲಾ ಆಶಾ ಮೆಂಟರ್ ಶಿಲ್ಪಾ ಅವರು ಪೊಲಿಯೋ ಲಸಿಕೆ ಹಾಕುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಚಿಕ್ಕಸಿಂದೋಗಿ, ಗುನ್ನಳ್ಳಿ, ಹೊರತಟ್ಟನಾಳ ಮತ್ತು ಮಂಗಳಪೂರ್ ಗ್ರಾಮಗಳ ಆರೋಗ್ಯ ನಿರೀಕ್ಷಣ ಅಧಿಕಾರಿ ಶಿವರಾಜ್ ಅವರು ಕಾರ್ಯಕ್ರಮದ ಮೇಲ್ವಿಚಾರಣೆ ನಡೆಸಿದರು. 5 ವರ್ಷದೊಳಗಿನ ಮಕ್ಕಳಿಗೆ ಎರಡು ಹನಿ ಪೊಲಿಯೋ ಲಸಿಕೆ ಹಾಕಿಸುವುದರಿಂದ ಮಕ್ಕಳಿಗೆ ಪೊಲಿಯೊ ರೋಗ ಬರದಂತೆ ಕಾಪಾಡುತ್ತದೆ. ಪೊಲಿಯೊ ಹನಿಯು ಉಚಿತ ಹಾಗೂ ಸುರಕ್ಷಿತವಾಗಿದೆ. ಪೊಲಿಯೊ ಮುಕ್ತ ಭಾರತಕ್ಕಾಗಿ ಎಲ್ಲರೂ ಸಹಕರಿಸಿ ಎಂದು ಸಾರ್ವಜನಿಕರಿಗೆ ಅರಿವು ಮೂಡಿಸಿದರು.

"SIHI KAHI" Kannada Daily Morning, Editor, Owner, Publisher, Printer by MARUTI BASAVANTAPPA HOASAMANI Published from Chittaragi Cross, S.C. Colony, Ward No. 9, Amingada-587112, Tq. Hungund Dist : Bagalkot, Karnataka and Printed at SUDIN PRINTERS, Sector No. 33, Shop No. 38 & 40, Opp. Ambedkar Bhavan, NAVANAGAR, BAGALKOT-587 101. Dist : Bagalkot, Karnataka State